# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ.. ಕನ್ನಡ ವಾರಪತ್ರಿಕೆ

**ಸುಭಾಷಿತ:**
ನಾನೇ ದೊಡ್ಡವನೆಂಬ ಅಹಂಕಾರ ಬೇಡವೇ ಬೇಡ.
ಸಹನೆ ತಾಳ್ಮೆ ಇರುವವರು ದೇವರಿದ್ದಂತೆ,
ಕೋಪ ತಾಪ ಇರುವವರು ಶತ್ರುಗಳಂತೆ,
ಯೋಗಭಾಗ್ಯವ ಪಡೆದವರು ಯೋಗಿಗಳಂತೆ,
ಪಾಪಕರ್ಮದಿ ತೊಡಗಿದವರು ಪಾಪಿಗಳಂತೆ,
ನ್ಯಾಯನೀತಿಯಲ್ಲಿ ಸಾಗುವವರು ಮನುಜರಂತೆ,
ಸತ್ಯಧರ್ಮದಲ್ಲಿ ನಡೆದು ಬಾಳುವವರು
ಭೂಮಿ ಪುತ್ರರಂತೆ, ಕಂಡರೂ ಎಲ್ಲವನ್ನು
ಅಳೆಯುವವನು ಭಗವಂತನೊಬ್ಬನೇ..
**ಭಗವಾನ್ ಶ್ರೀಕೃಷ್ಣ**



PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 28-08-2026 to 03-09-2026 ಬೆಲೆ:10-00 ಸಂಪುಟ–1 ಸಂಚಿಕೆ–48 ಪುಟಗಳು–6




ರಕ್ಷಾ ಬಂಧನ ಹಬ್ಬದ ಶುಭಾಶಯಗಳು

ಕರಾವಳಿ ತರಂಗಿಣಿ ಮಂಗಳೂರು

ಕ್ಷಣ ಕ್ಷಣದ ಸುದ್ದಿಗಳಿಗಾಗಿ ಕರಾವಳಿ ತರಂಗಿಣಿ ಪತ್ರಿಕಾ ಬಳಗದಿಂದ ಅಂತರ್ಜಾಲ ಮಾಧ್ಯಮ

www.karavalitharangini.com

ಕರಾವಳಿ ತರಂಗಿಣಿ ಮಂಗಳೂರು




ಗಣೇಶ ಹಬ್ಬ ಸಮೀಪಿಸುತ್ತಿದ್ದು, ಮನೆಮನೆಗಳಲ್ಲೂ ವಿಘ್ನನಿವಾರಕನ ಆಗಮನದಕ್ಕೆ ಸಂಭ್ರಮದಿಂದ ಕಾಯುತ್ತಿದ್ದಾರೆ. ಈ ಪವಿತ್ರ ಹಬ್ಬವನ್ನು ಆಚರಿಸುವಾಗ ಪರಿಸರ ಕಾಳಜಿ ವಹಿಸುವುದು ಪ್ರತಿಯೊಬ್ಬರ ಕರ್ತವ್ಯ. ಪ್ಲಾಸ್ಟರ್ ಆಫ್ ಪ್ಯಾರಿಸ್ ಮತ್ತು ರಾಸಾಯನಿಕ ಬಣ್ಣಗಳಿಂದ ಮಾಡಿದ ಮೂರ್ತಿಗಳು ನೀರನ್ನು ಕಲುಷಿತಗೊಳಿಸಿ, ಜಲಚರಗಳಿಗೆ ಹಾನಿ ಉಂಟುಮಾಡುತ್ತವೆ. ಇದಕ್ಕೆ ಬದಲಾಗಿ, ಶುದ್ಧ ಮಣ್ಣಿನಿಂದ ತಯಾರಿಸಿದ ಗಣೇಶನ ಮೂರ್ತಿಗಳನ್ನು ಮಾತ್ರ ಪೂಜಿಸೋಣ. ಮಣ್ಣಿನ ಮೂರ್ತಿಯು ನೀರಿನಲ್ಲಿ ಸುಲಭವಾಗಿ ಕರಗಿ ಪ್ರಕೃತಿಯಲ್ಲಿ ಒಂದಾಗುತ್ತದೆ. ಈ ಬಾರಿಯ ಹಬ್ಬದಲ್ಲಿ ಪರಿಸರ ಸ್ನೇಹಿ ಗಣಪತಿಯನ್ನು ಪ್ರತಿಯೊಬ್ಬರೂ ಮನೆಗೆ ತಂದು, ಪ್ರಕೃತಿಯನ್ನು ರಕ್ಷಿಸುವ ಸಂಕಲ್ಪ ಮಾಡೋಣ. ನಿಸರ್ಗದ ಮಡಿಲನ್ನು ಸ್ವಚ್ಛವಾಗಿಡುವುದೇ ನಾವು ಗಣೇಶನಿಗೆ ನೀಡುವ ನಿಜವಾದ ಪೂಜೆ. ಪರಿಸರ ಉಳಿಸಿ, ಹಬ್ಬದ ಸಿಹಿಯನ್ನು ಹೆಚ್ಚಿಸೋಣ.

## ಅಲ್ಪಸಂಖ್ಯಾತರ ರಕ್ಷಣೆಗೆ ನಮ್ಮ ಸರ್ಕಾರ ಬದ್ಧ –ಸಿಎಂ



**ಬೆಂಗಳೂರು:** ಅಲ್ಪಸಂಖ್ಯಾತರ ರಕ್ಷಣೆ, ಅಭಿವೃದ್ಧಿ ಹಾಗೂ ಸೇವೆಗೆ ರಾಜ್ಯ ಸರ್ಕಾರ ಸಂಪೂರ್ಣ ಬದ್ಧವಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸ್ಪಷ್ಟಪಡಿಸಿದರು. ಮರ್ಕಝಿ ಮಿಲಾದ್ ಓ ಸೀರತ್ ಕಮಿಟಿ ಸುನ್ನಿ ಜಮಾಯತ್ ಆಲ್ ಕರ್ನಾಟಕ ವತಿಯಿಂದ ಬೆಂಗಳೂರಿನ ವೈಎಂಸಿಎ ಮೈದಾನದಲ್ಲಿ ನಡೆದ ಈದ್ ಮಿಲಾದ್ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಧರ್ಮ ಯಾವುದಾದರೂ ತತ್ವ ಒಂದೇ, ದೇವನೊಬ್ಬ ನಾಮ ಹಲವು. ಯಾವುದೇ ಧರ್ಮವು 3ನೇ ಪುಟಕ್ಕೆ

## ತಟ್ಟೆಗೆ ಬರುವ ಮೀನಿನಲ್ಲಿಯೂ ಅಡಗಿದೆ ರಾಸಾಯನಿಕ ವಿಷ!

ಇಂದಿನ ಧಾವಂತದ ಜೀವನಶೈಲಿಯಲ್ಲಿ ನಾವು ಸೇವಿಸುವ ಆಹಾರ ಕಲಬೆರಕೆಯಿಂದ ಕೂಡಿದೆ. ಅದರಲ್ಲೂ ಕರಾವಳಿ ಭಾಗದ ಜನರ ಪ್ರಮುಖ ಆಹಾರವಾದ ಮೀನು ಕೂಡ ಇದಕ್ಕೆ ಹೊರತಾಗಿಲ್ಲ. ತಾಜಾವಾಗಿ ಕಾಣಿಸಬೇಕೆಂಬ ವ್ಯಾಪಾರಿಗಳ ದುರಾಸೆಗೆ ಗ್ರಾಹಕರ ಆರೋಗ್ಯ ಗಂಭೀರ ಅಪಾಯಕ್ಕೆ ಸಿಲುಕುತ್ತಿದೆ. ದೂರದ ಬಂದರುಗಳಿಂದ ಮೀನುಗಳನ್ನು ಸಾಗಿಸುವಾಗ ಕೊಳೆತು ಹೋಗದಂತೆ ತಡೆಯಲು ಕೆಲವರು ಅಪಾಯಕಾರಿ ರಾಸಾಯನಿಕಗಳನ್ನು ಬಳಸುವುದು ಆತಂಕಕಾರಿ. ಶವಗಳನ್ನು ಸಂರಕ್ಷಿಸಲು ಬಳಸುವ ಫಾರ್ಮಾಲಿನ್‌ನ್ನು ಮೀನುಗಳು ತಾಜಾವಾಗಿ ಕಾಣಲು ಬಳಸಲಾಗುತ್ತದೆ. ಜೊತೆಗೆ ದುರ್ವಾಸನೆ ಮರೆಮಾಚಲು ಅಮೋನಿಯಾ ಮತ್ತು ಮೀನಿಗೆ ಕೃತಕ ಕೆಂಪು ಬಣ್ಣ ಬಳಸಿ ಗ್ರಾಹಕರನ್ನು ಮೋಸ ಮಾಡಲಾಗುತ್ತದೆ. 3ನೇ ಪುಟಕ್ಕೆ



## ಜಿಲ್ಲೆಯಲ್ಲಿ 1.50 ಲಕ್ಷ ಮತದಾರರಿಗೆ ನೋಟಿಸ್ –ಜಿಲ್ಲಾಧಿಕಾರಿ

**ಮಂಗಳೂರು:** ಎಸ್‌ಐಆರ್ ಪ್ರಕ್ರಿಯೆಯಡಿ ಕರಡು ಮತದಾರರ ಪಟ್ಟಿ ಪ್ರಕಟವಾಗಿದ್ದು, ಅದರಂತೆ ದ.ಕ. ಜಿಲ್ಲೆಯಲ್ಲಿ 16,46,387 ಮತದಾರರಿದ್ದಾರೆ. ಮ್ಯಾಪಿಂಗ್ ಆಗದಿರುವ ಮತ್ತು ಹೆಸರು ಬದಲಾವಣೆ, ಪೋಷಕರ ಹೆಸರು ಬದಲಾವಣೆ, ವಯಸ್ಸಿನ ಅಂತರ ಸೇರಿದಂತೆ ತಾರ್ಕಿಕ ದೋಷಗಳಿಂದ ಕರಡು ಮತದಾರರ ಪಟ್ಟಿಯಿಂದ ಹೊರಗುಳಿದಿರುವ 1,50,153 ಮತದಾರರಿಗೆ ಬಿಎಲ್‌ಒಗಳ ಮೂಲಕ ನೋಟಿಸ್ ಹಂಚಿಕೆಯಾಗಲಿದೆ ಎಂದು ದ.ಕ. ಜಿಲ್ಲಾಧಿಕಾರಿ ದರ್ಶನ್ ಎಚ್.ವಿ. ಹೇಳಿದ್ದಾರೆ. ನಗರದ ಪಡೀಲ್‌ನ ಪ್ರಜಾಸೌಧದಲ್ಲಿ ಸುದ್ದಿಗೋಷ್ಠಿಯಲ್ಲಿ ಜಿಲ್ಲೆಯ 3ನೇ ಪುಟಕ್ಕೆ









## ಅಲ್ಪಸಂಖ್ಯಾತರ ರಕ್ಷಣೆಗೆ ನಮ್ಮ ಸರ್ಕಾರ ಬದ್ಧ–ಸಿಎಂ

ಒಂದನೇ ಪುಟದಿಂದ......

ಬೇರೆಯವರಿಗೆ ತೊಂದರೆ ಮಾಡಲು ಹೇಳುವುದಿಲ್ಲ. ದೇಶದಲ್ಲಿ ಶಾಂತಿ, ಐಕ್ಯತೆ ಹಾಗೂ ಸಮಗ್ರತೆ ನೆಲೆಸಬೇಕು ಎಂದುಎಲ್ಲಾ ಧರ್ಮ ಗುರುಗಳು ಸಾರಿದ್ದಾರೆ ಎಂದರು. ಪ್ರವಾದಿ ಮಹಮ್ಮದ್ ಅವರ ಜನ್ಮದಿನದ ಸಂದೇಶವನ್ನು ಸ್ಮರಿಸಿದ ಅವರು, ದೆಹಲಿ ಪ್ರವಾಸವಿದ್ದರೂ ಜನರ ಮೇಲಿನ ಅಭಿಮಾನದಿಂದ ಈ ಕಾರ್ಯಕ್ರಮಕ್ಕೆ ಆಗಮಿಸಿರುವುದಾಗಿ ತಿಳಿಸಿದರು. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಎಲ್ಲರನ್ನು ಸಮಾನತೆಯಿಂದ ಕಾಣುತ್ತಿದ್ದು, ಸಾಮಾಜಿಕ ನ್ಯಾಯ ಹಾಗೂ ಶಾಂತಿಕಾಪಾಡಲು ಬದ್ಧವಾಗಿದೆ ಎಂದರು. ಅಲ್ಪಸಂಖ್ಯಾತರ ಅಭಿವೃದ್ಧಿಗೆ ವಿಶೇಷ ಅನುದಾನ ಮೀಸಲಿಡಲಾಗಿದ್ದು, ಪ್ರಥಮ ಬಾರಿಗೆ ಸಮುದಾಯಕ್ಕೆ ಪರಿಷತ್ ಸಭಾಪತಿ ಸ್ಥಾನ, ಮೂರು ಸಚಿವ ಸ್ಥಾನ ಹಾಗೂ ಹತ್ತಾರು ನಿಗಮಗಳ ಅಧ್ಯಕ್ಷ ಸ್ಥಾನಗಳನ್ನು ನೀಡಿರಾಜಕೀಯವಾಗಿ ಸಬಲೀಕರಣಗೊಳಿಸಲಾಗಿದೆ ಎಂದು ತಿಳಿಸಿದರು.

## ತಟ್ಟೆಗೆ ಬರುವ ಮೀನಿನಲ್ಲಿಯೂ ಅಡಗಿದೆ ರಾಸಾಯನಿಕ ವಿಷ

ಒಂದನೇ ಪುಟದಿಂದ......

ಇಂತಹ ರಾಸಾಯನಿಕ ಯುಕ್ತ ಮೀನುಗಳ ನಿರಂತರ ಸೇವನೆಯಿಂದ ಜೀರ್ಣಾಂಗ ವ್ಯವಸ್ಥೆ ಹದಗೆಟ್ಟು ಹೊಟ್ಟೆನೋವು, ವಾಂತಿ ಉಂಟಾಗುತ್ತದೆ. ಫಾರ್ಮಾಲಿನ್ ಕ್ಯಾನ್ಸರ್ಕಾರಕವಾಗಿದ್ದು ಜೀವಕೋಶಗಳಿಗೆ ಹಾನಿ ಮಾಡುತ್ತದೆ. ಅಲ್ಲದೆ ಯಕೃತ್ತು, ಮೂತ್ರಪಿಂಡದ ಕಾರ್ಯಕ್ಷಮತೆ ಕುಂದಿಸಿ, ಚರ್ಮದ ಅಲರ್ಜಿಗೆ ಕಾರಣವಾಗುತ್ತದೆ. ಸಾರ್ವಜನಿಕರ ಆರೋಗ್ಯ ರಕ್ಷಣೆಗಾಗಿ ಸರಕಾರ ಮತ್ತು ಆಹಾರ ಸುರಕ್ಷತಾ ಇಲಾಖೆಯು ಕಠಿಣ ಕ್ರಮ ಕೈಗೊಳ್ಳಬೇಕು. ಮಾರುಕಟ್ಟೆಗಳಲ್ಲಿ ನಿರಂತರ ತಪಾಸಣೆ ನಡೆಸಿ, ರಾಸಾಯನಿಕ ಬಳಸುವವರ ವಿರುದ್ಧ ನಿರ್ದಾಕ್ಷಿಣ್ಯ ಕಾನೂನು ಕ್ರಮಜರುಗಿಸಬೇಕು. ನಾವೂ ಕೂಡ ಮುನ್ನೆಚ್ಚರಿಕೆ ವಹಿಸಬೇಕು. ರಾಸಾಯನಿಕ ಸಿಂಪಡಿಸಿದ ಮೀನಿನಲ್ಲಿ ಸ್ವಾಭಾವಿಕ ವಾಸನೆ ಇರುವುದಿಲ್ಲ. ಮೀನಿನ ಕಿವಿ ಅತಿಗಾಢ ಕೆಂಪು ಬಣ್ಣದಲ್ಲಿದ್ದರೆ ಎಚ್ಚರವಿರಲಿ. ಅಡುಗೆಗೆ ಬಳಸುವ ಮುನ್ನ ಮೀನನ್ನು ಉಪ್ಪು ಅಥವಾ ಅರಿಶಿನ ನೀರಿನಲ್ಲಿ 15–20 ನಿಮಿಷ ನೆನೆಸಿ ಚೆನ್ನಾಗಿ ತೊಳೆಯಬೇಕು. ದೂರದ ಊರುಗಳ ಶೀತಲೀಕೃತ ಮೀನುಗಳ ಬದಲು ಸ್ಥಳೀಯರ ತಾಜಾ ಮೀನುಗಳಿಗೆ ಆದ್ಯತೆ ನೀಡಿ.

## ಜಿಲ್ಲೆಯಲ್ಲಿ 1.50 ಲಕ್ಷ ಮತದಾರರಿಗೆ ನೋಟಿಸ್– ಜಿಲ್ಲಾಧಿಕಾರಿ

ಒಂದನೇ ಪುಟದಿಂದ......

ಕರಡು ಮತದಾರರ ಮಾಹಿತಿಯನ್ನು ನೀಡಿ ಮಾತನಾಡಿದ ಅವರು, ಆ.24ರಿಂದ ಆರಂಭಗೊಂಡು ಸೆಪ್ಟೆಂಬರ್ 23ರ ಅವಧಿಯಲ್ಲಿ ಕರಡು ಮತದಾರರ ಪಟ್ಟಿಯಿಂದ ಹೊರಗುಳಿದಿರುವ 1,50,153 ಮತದಾರರಿಗೆ ನೋಟಿಸ್ ಹಂಚಿಕೆಯಾಗಿ ಆ ಅವಧಿಯಲ್ಲಿ ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಕೆಗೆ ಚುನಾವಣಾ ಆಯೋಗ ಅವಕಾಶ ಕಲ್ಪಿಸಿದೆ ಎಂದರು. ವಿಚಾರಣೆಯ ದಿನಾಂಕ, ಸಮಯ ಮತ್ತು ಸ್ಥಳದ ವಿವರ ನೋಟಿಸ್‌ನಲ್ಲಿ ಇರಲಿದ್ದು, ಬಿಎಲ್‌ಒಗಳು ನಿಗದಿತ ಅವಧಿಯೊಳಗೆ ಮತದಾರರ ಮನೆಗಳಿಗೆ ನೋಟಿಸ್ ತಲುಪಿಸಲಿದ್ದಾರೆ. ನೋಟಿಸ್‌ನಲ್ಲಿ ತಿಳಿಸಲಾದ ನಿಗದಿತ ಅವಧಿಯೊಳಗೆ ಮತದಾರರು ಲಿಖಿತ ಮನವಿಯೊಂದಿಗೆ ಮತದಾರರ ನೋಂದಣಾಧಿಕಾರಿ ಅಥವಾ ಸಹಾಯಕ ಮತದಾರರ ನೋಂದಣಾಧಿಕಾರಿಯನ್ನು ಭೇಟಿಯಾಗಲು ಸಾಧ್ಯವಾಗದಿದ್ದಲ್ಲಿ ಮತ್ತೊಂದು ಕಾಲಾವಕಾಶ ನೀಡಲಾಗುತ್ತದೆ. ಈ ಅವಧಿಯಲ್ಲಿಯೂ ಮತದಾರರು ವಿಚಾರಣೆಗೆ ಹಾಜರಾಗದಿದ್ದರೆ ಮತದಾರರ ಪಟ್ಟಿಯಿಂದ ಹೆಸರು ತೆಗೆದು ಹಾಕಲಾಗುತ್ತದೆ ಎಂದು ಅವರು ಹೇಳಿದರು. ಮತದಾರರು ವಿಚಾರಣೆಗೆ ಹಾಜರಾಗುವ ಸಂದರ್ಭ ನಮೂನೆಯಲ್ಲಿ ವಿವರಗಳನ್ನು ಭರ್ತಿ ಮಾಡಿಕೊಂಡು ಬರಬೇಕು. ಮತದಾರರು ಆನ್‌ಲೈನ್ ಮೂಲಕ ದಾಖಲೆಗಳನ್ನು ಅಪ್ ಲೋಡ್ ಮಾಡಬಹುದು. ಆದರೆ ಭೌತಿಕವಾಗಿ ಮತದಾರ ನೋಂದಣಾಧಿಕಾರಿ ಅಥವಾ ಸಹಾಯಕ ಮತದಾರರ ನೋಂದಣಾಧಿಕಾರಿ ಎದುರು ಹಾಜರಾಗುವುದು ಕಡ್ಡಾಯ ಎಂದು ಜಿಲ್ಲಾಧಿಕಾರಿ ದರ್ಶನ್ ಸ್ಪಷ್ಟಪಡಿಸಿದರು. ಈಗಾಗಲೇ ಚುನಾವಣಾ ಆಯೋಗವು ತಿಳಿಸಿರುವಂತೆ, 1987ರ ಜುಲೈ 1ಕ್ಕಿಂತ ಮೊದಲು ಜನಿಸಿದವರಾಗಿದ್ದರೆ ಸ್ವಂತಕ್ಕೆ ಸಂಬಂಧಿಸಿದಂತೆ ಜನ್ಮ ದಿನಾಂಕ ಮತ್ತು ಅಥವಾ ಜನ್ಮ ಸ್ಥಳವನ್ನು ದೃಢೀಕರಿಸುವ ದಾಖಲೆಯನ್ನು ಒದಗಿಸಬೇಕು. 1987 ಜುಲೈ 1ರಿಂದ 2004ರ ಡಿಸೆಂಬರ್ 2 ರೊಳಗೆ ಜನಿಸಿದ್ದವರು ಜನ್ಮ ದಿನಾಂಕ, ಅಥವಾ ಜನ್ಮ ಸ್ಥಳವನ್ನು ದೃಢೀಕರಿಸುವ ದಾಖಲೆ ಜೊತೆಗೆ ತಂದೆ ಅಥವಾ ತಾಯಿಗೆ ಸಂಬಂಧಿಸಿದಂತೆ ಅವರ ಜನ್ಮ ದಿನಾಂಕ ಅಥವಾ ಜನ್ಮ ಸ್ಥಳವನ್ನು ದೃಢೀಕರಿಸುವ ದಾಖಲೆಗಳನ್ನು ಸಲ್ಲಿಸಬೇಕು ಎಂದು ಅವರು ಹೇಳಿದರು. 2026 ರ ಜೂನ್‌ವರೆಗಿನ ಮತದಾರರ ಪಟ್ಟಿಯಲ್ಲಿ ಹೆಸರಿದ್ದರೂ, 2002ರ ಮತದಾರರ ಪಟ್ಟಿಗೆ ಮ್ಯಾಪಿಂಗ್ ಸಂದರ್ಭ ಹೆಸರು ಬಿಟ್ಟು ಹೋಗಿದ್ದಲ್ಲಿ ಮತದಾರರಿಗೆ ನೋಟಿಸ್ ಬಂದರೆ ಅವರನ್ನು ಮತದಾರರ ಪಟ್ಟಿಯಿಂದಕೈಬಿಡುವುದು ಎಂದರ್ಥವಲ್ಲ ಎಂದರು.

## ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ

ಮಂಗಳೂರು : ಜಾನಪದ ಕಲಾವಿದರು, ವಿದ್ವಾಂಸರು, ವಾದ್ಯಗಾರರು, ಬುಡಕಟ್ಟು ಜನರನ್ನೊಳಗೊಂಡಂತೆ "ಜಾನಪದ ಸಂಗಮ" ಹೆಸರಿನ ಕಾರ್ಯಕ್ರಮವನ್ನು ಗಿರಿಜನ ಉಪಯೋಜನೆಯಡಿ ಸರ್ಕಾರವು ಹೊಸಯೋಜನೆಯಾಗಿ ಘೋಷಿಸಿದೆ. ಗಿರಿಜನ ಉಪಯೋಜನೆಯಡಿ ರಾಜ್ಯದ 4 ವಿಭಾಗಗಳಲ್ಲಿ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಜಾನಪದ ಕಲಾಪ್ರಕಾರದ ತರಬೇತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ವಿವರಗಳಿಗೆ ಅಕಾಡೆಮಿ ಇ-ಮೇಲ್ registrar.janapada@gmail.com ಅಥವಾ ದೂರವಾಣಿ ಸಂಖ್ಯೆ 080-22215509 ಸಂಪರ್ಕಿಸಬಹುದು. ಶಿಬಿರಾರ್ಥಿಗಳ ಆಯ್ಕೆಯಲ್ಲಿ ಅಕಾಡೆಮಿಯ ತೀರ್ಮಾನವೇ ಅಂತಿಮವಾಗಿರುತ್ತದೆ ಎಂದು ಪ್ರಕಟಣೆ ತಿಳಿಸಿದೆ.

## ಕೆ.ಎಸ್.ಆರ್.ಟಿ.ಸಿ. : ಶಿಶಿಕ್ಷು ತರಬೇತಿಗೆ ಅರ್ಜಿ ಆಹ್ವಾನ

ಮಂಗಳೂರು – ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಪುತ್ತೂರು ವಿಭಾಗದಲ್ಲಿ ಶಿಶಿಕ್ಷು ತರಬೇತಿ ಪಡೆಯಲು ಇಚ್ಚಿಸುವ ಐ.ಟಿ.ಐ ಹಾಗೂ ಎಸ್.ಎಸ್.ಎಲ್.ಸಿ ತೇರ್ಗಡೆಯಾದ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಆಯೋಗದ ವೆಬ್‌ಸೈಟ್ www.apprenticeshipindia.org. ನಲ್ಲಿ ಆನ್‌ಲೈನ್ ಮೂಲಕ ನೋಂದಣಿ ಮಾಡಬೇಕು ಹಾಗೂ ನೋಂದಣಿ ಪ್ರತಿಯನ್ನು ಸಲ್ಲಿಸಬೇಕು.

## ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಂದ ಪಿಹೆಚ್‌ಡಿ ಫೆಲೋಶಿಪ್‌ಗೆ ಅರ್ಜಿ ಆಹ್ವಾನ

ಶಿವಮೊಗ್ಗ : 2026–27ನೇ ಸಾಲಿಗೆ ವಿಶ್ವವಿದ್ಯಾಲಯಗಳಲ್ಲಿ ಪಿಹೆಚ್‌ಡಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳಿಂದ ಫೆಲೋಶಿಪ್ ಯೋಜನೆಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಶಿವಮೊಗ್ಗ ಜಿಲ್ಲಾ ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ. ಹೆಚ್ಚಿನ ವಿವರಗಳಿಗಾಗಿ ಆಸಕ್ತ ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳು ದೂರವಾಣಿ ಸಂಖ್ಯೆ 08182-220206 ಸಂಪರ್ಕಿಸಬಹುದು ಎಂದು ತಿಳಿಸಿದ್ದಾರೆ.

## ಉದ್ದಿಮೆದಾರರಿಗೆ ನೆರವು : ಅರ್ಜಿ ಆಹ್ವಾನ

ಶಿವಮೊಗ್ಗ : ರಾಜ್ಯ ಸರ್ಕಾರವು ವಿಶೇಷ ಘಟಕ ಯೋಜನೆ/ಗಿರಿಜನ ಉಪ ಯೋಜನೆಯಡಿ ಸ್ಟಾರ್ಟ್ ಸೀಡ್ ಕ್ಯಾಪಿಟಲ್, ಶೇ. 60 ಸಹಾಯಧನ, ಸಾಲ ಶುಲ್ಕ ಮರುಪಾವತಿ ಮತ್ತು ವಿದ್ಯುಚ್ಛಕ್ತಿ ಸಹಾಯಧನ ಯೋಜನೆಗಳಡಿ ಅರ್ಹ ಉದ್ದಿಮೆದಾರರಿಗೆ ನೆರವು ನೀಡಲು ಅರ್ಜಿ ಆಹ್ವಾನಿಸಿದೆ. ಈಗಾಗಲೇ ಬ್ಯಾಂಕಿನಿಂದ ಸಾಲ ಪಡೆದು ಘಟಕಗಳನ್ನು ಸ್ಥಾಪಿಸಿರುವ ಅರ್ಹ ಉದ್ದಿಮೆದಾರರು ಹಾಗೂ ಬ್ಯಾಂಕ್ ಸಾಲ ಪಡೆದು ಉದ್ದಿಮೆ ಸ್ಥಾಪಿಸಲು ಇಚ್ಚಿಸಿರುವ ಉದ್ದಿಮೆದಾರರು ಹೆಚ್ಚಿನ ವಿವರಗಳಿಗೆ ಜಂಟಿ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರ, ನೆಹರೂ ರಸ್ತೆ, ಶಿವಮೊಗ್ಗ ಇವರನ್ನು ಸಂಪರ್ಕಿಸುವಂತೆ ಶಿವಮೊಗ್ಗ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಅರ್ಜಿ ಆಹ್ವಾನ

ಮಡಿಕೇರಿ – ಸರ್ಕಾರದಿಂದ ಮಾನ್ಯತೆ ಪಡೆದ ವಿಶ್ವವಿದ್ಯಾನಿಲಯಗಳಲ್ಲಿ 2026–27ನೇ ಸಾಲಿನಲ್ಲಿ ಪೂರ್ಣ ಕಾಲಿಕವಾಗಿ ಪಿಹೆಚ್‌ಡಿ ಸಂಶೋಧನೆ ಕೈಗೊಳ್ಳುತ್ತಿರುವ ಅಲ್ಪಸಂಖ್ಯಾತ ಅಭ್ಯರ್ಥಿಗಳಿಗೆ (ಜೆಆರ್‌ಎಫ್ ಮಾದರಿ) ಫೆಲೋಶಿಪ್ ಪಾವತಿಸುವ ಸಂಬಂಧ ಪಿಹೆಚ್.ಡಿ ಫೆಲೋಶಿಪ್ ಯೋಜನೆಯಡಿ ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ವಿವರಗಳಿಗಾಗಿ ಕೊಡಗು ಜಿಲ್ಲೆ 9972799091, ತಾಲ್ಲೂಕು ಮಾಹಿತಿ ಕೇಂದ್ರ ವಿರಾಜಪೇಟೆ ದೂ.ಸಂ. 9900731037 ನ್ನು ಸಂಪರ್ಕಿಸಬಹುದು

## ಅರ್ಜಿ ಆಹ್ವಾನ

ಮಡಿಕೇರಿ – 2026–27ನೇ ಸಾಲಿನ ಐಐಟಿ, ಐಐಐಟಿ ಮುಂತಾದ ಪ್ರತಿಷ್ಠಿತ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಕರ್ನಾಟಕ ರಾಜ್ಯದ ಅರ್ಹ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಆನ್‌ಲೈನ್ ಮೂಲಕ ಪ್ರೋತ್ಸಾಹಧನ/ಉತ್ತೇಜನಕ್ಕಾಗಿ ಸೇವಾಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ವಿವರಗಳಿಗೆ ಮಡಿಕೇರಿ ಕೊಡಗು ಜಿಲ್ಲೆ: 9972799091, ತಾಲ್ಲೂಕು ಮಾಹಿತಿ ಕೇಂದ್ರ ವಿರಾಜಪೇಟೆ ದೂ.ಸಂ.: 9900731037

## ಎಸ್. ಜಗದೀಶ್ಚಂದ್ರ ಅಂಚನ್‌ಗೆ ಬಸವಶ್ರೀ ರಾಜ್ಯ ಪ್ರಶಸ್ತಿ



ಮಂಗಳೂರು: ಕ್ರೀಡಾ ಅಂಕಣಕಾರ ಹಾಗೂ ಬರಹಗಾರರಾದ ಎಸ್‌ಜಗದೀಶ್ಚಂದ್ರ ಅಂಚನ್ ಸೂಟರ್‌ಪೇಟೆ ಅವರಿಗೆ 'ಬಸವಶ್ರೀ ರಾಜ್ಯ ಪ್ರಶಸ್ತಿ' ಘೋಷಿಸಲಾಗಿದೆ. ಬೆಂಗಳೂರಿನ ಶ್ರೀ ಜ್ಞಾನ ಮಂದಿರ ಎಜುಕೇಷನಲ್ ಅಂಡ್ ಸಾಂಸ್ಕೃತಿಕ ಟ್ರಸ್ಟ್ ತನ್ನ ಬೆಳ್ಳಿ ಹಬ್ಬದ ಸಂಭ್ರಮದ ಅಂಗವಾಗಿ ಕ್ರೀಡಾ ಸಾಹಿತ್ಯ ಕ್ಷೇತ್ರಕ್ಕೆ ಸಲ್ಲಿಸುತ್ತಿರುವ ಅಮೂಲ್ಯ ಸೇವೆಯನ್ನು ಗುರುತಿಸಿ ಈ ಪ್ರತಿಷ್ಠಿತ ಪ್ರಶಸ್ತಿಗೆ ಇವರನ್ನು ಆಯ್ಕೆ ಮಾಡಿದೆ. ಮಾಧ್ಯಮ ಕ್ಷೇತ್ರದಲ್ಲಿ ಸು ಮಾರು 32 ವರ್ಷಗಳಿಂದ ಸಕ್ರಿಯವಾಗಿರುವ ಎಸ್. ಜಗದೀಶ್ಚಂದ್ರ ಅಂಚನ್ ಅವರು ಕ್ರೀಡಾ ಬರವಣಿಗೆ ಹಾಗೂ ಕ್ರೀಡಾ ಅಂಕಣಕಾರರಾಗಿ ಅಪಾರ ಸಾಧನೆ ಮಾಡಿದ್ದಾರೆ. ಇವರು ಜಿಲ್ಲೆ, ರಾಜ್ಯ ಹಾಗೂ ಅಂತಾರಾಜ್ಯ ಮಟ್ಟದ ಕನ್ನಡ ದಿನ ಪತ್ರಿಕೆಗಳು, ವಾರಪತ್ರಿಕೆಗಳು ಮತ್ತು ಮಾಸಪತ್ರಿಕೆಗಳಲ್ಲಿ ಒಟ್ಟು 4,500ಕ್ಕೂ ಅಧಿಕ ಕ್ರೀಡಾ ಲೇಖನಗಳು ಮತ್ತು ಅಂಕಣ ಬರಹಗಳನ್ನು ಬರೆದಿದ್ದಾರೆ. ಕ್ರೀಡಾ ಕ್ಷೇತ್ರದ ಬೆಳವಣಿಗೆ, ಸಾಧನೆಗಳು ಹಾಗೂ ಕ್ರೀಡಾ ವಿಷಯಗಳ ಕುರಿತು ಆಳವಾದ ವಿಮರ್ಶೆ ಮತ್ತು ವಿಶ್ಲೇಷಣಾತ್ಮಕ ಬರಹಗಳ ಮೂಲಕ ಕನ್ನಡ ಕ್ರೀಡಾ ಸಾಹಿತ್ಯ ಲೋಕದಲ್ಲಿ ತಮ್ಮದೇ ಆದ ವಿಶಿಷ್ಟ ಛಾಪು ಮೂಡಿಸಿದ್ದಾರೆ. ಕ್ರೀಡಾ ಬರವಣಿಗೆಯ ಜೊತೆಗೆ ಸಾಹಿತ್ಯ ಕ್ಷೇತ್ರದಲ್ಲೂ ಸಕ್ರಿಯರಾಗಿರುವ ಇವರು, ಇತ್ತೀಚೆಗೆ 'ತ್ಯಾಗಮಯಿ ಮೊಳಹಳ್ಳಿ' ಎಂಬ ಕೃತಿಯನ್ನು ರಚಿಸಿ ಬಿಡುಗಡೆಗೊಳಿಸಿದ್ದಾರೆ.

## ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿರ್ದೇಶಕರಾಗಿ ಶಶಿಕುಮಾರ್ ರೈ ಬಾಲ್ಯೊಟ್ಟು



ಮಂಗಳೂರು : ಬೆಂಗಳೂರಿನಲ್ಲಿ ನಡೆದ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿಯಮಿತದ ಆಡಳಿತ ಮಂಡಳಿ ಚುನಾವಣೆಯಲ್ಲಿ ಮೈಸೂರು ವಿಭಾಗದ ನಿರ್ದೇಶಕ ಸ್ಥಾನಕ್ಕೆ ಸ್ಪರ್ಧಿಸಿದ್ದ ದಕ್ಷಿಣ ಕನ್ನಡ ಜಿಲ್ಲಾ ಸಹಕಾರಿ ಯೂನಿಯನ್ ಅಧ್ಯಕ್ಷ ಶಶಿಕುಮಾರ್ ರೈ ಬಾಲ್ಯೊಟ್ಟು ಅವರು ಅಭೂತ ಪೂರ್ವ ಜಯ ಸಾಧಿಸಿದ್ದಾರೆ. ಅತ್ಯಂತ ಕುತೂಹಲ ಕೆರಳಿಸಿದ್ದ ಈ ಚುನಾವಣೆಯಲ್ಲಿ ಮೈಸೂರು ವಿಭಾಗದ ಒಟ್ಟು 18 ಮತಗಳಲ್ಲಿ ಸಂಪೂರ್ಣ 18 ಮತಗಳನ್ನು ಪಡೆಯುವ ಮೂಲಕ ಅವರು ಸರ್ವಾನುಮತದ ಭರ್ಜರಿ ಗೆಲುವು ದಾಖಲಿಸಿದ್ದಾರೆ. ಈ ವಿಜಯದೊಂದಿಗೆ ಶಶಿಕುಮಾರ್ ರೈ ಬಾಲ್ಯೊಟ್ಟು ಅವರು ಕಳೆದ 62 ವರ್ಷಗಳ ಸುದೀರ್ಘ ಇತಿಹಾಸ ಹೊಂದಿರುವ ಪ್ರತಿಷ್ಠಿತ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ನಿರ್ದೇಶಕರಾಗಿ ಆಯ್ಕೆಯಾದ ದಕ್ಷಿಣ ಕನ್ನಡ ಜಿಲ್ಲೆಯ ಪ್ರಪ್ರಥಮ ಪ್ರತಿನಿಧಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಕರಾವಳಿ ಭಾಗದ ಸಹಕಾರಿ ಕ್ಷೇತ್ರಕ್ಕೆ ಈ ಆಯ್ಕೆಯು ಹೊಸ ಚೈತನ್ಯವನ್ನು ತುಂಬಿದ್ದು, ಜಿಲ್ಲೆಯ ಸಹಕಾರ ಕ್ಷೇತ್ರದ ಇತಿಹಾಸದಲ್ಲಿ ನೂತನ ಅಧ್ಯಾಯವನ್ನು ಬರೆದಿದೆ.

## ಡಾ. ವೀರೇಂದ್ರ ಹೆಗ್ಗಡೆಯವರಿಂದ ಆಶೀರ್ವಾದ ಪಡೆದ ನಟ ಯಶ್



ಉಜಿರೆ: ಕನ್ನಡ ಚಿತ್ರರಂಗದ ಖ್ಯಾತ ನಟ ಯಶ್ ಅವರು ಮಂಗಳವಾರ ಪ್ರಸಿದ್ಧ ಪುಣ್ಯಕ್ಷೇತ್ರವಾದ ಧರ್ಮಸ್ಥಳಕ್ಕೆ ಭೇಟಿ ನೀಡಿ, ಧರ್ಮಾಧಿಕಾರಿ ಡಾ. ಡಿ. ವೀರೇಂದ್ರ ಹೆಗ್ಗಡೆಯವರನ್ನು ಭೇಟಿಯಾಗಿ ಆಶೀರ್ವಾದ ಪಡೆದುಕೊಂಡಿದ್ದಾರೆ. ಧರ್ಮಸ್ಥಳಕ್ಕೆ ಆಗಮಿಸಿದ ನಟ ಯಶ್ ಅವರನ್ನು 'ಬೀಡು'ವಿನಲ್ಲಿ ಡಿ. ಹರ್ಷೇಂದ್ರಕುಮಾರ್ ಅವರು ಹಾರ ಹಾಕಿ ಅತ್ಯಂತ ಆದರದಿಂದ ಬರಮಾಡಿಕೊಂಡರು. ಬಳಿಕ ಧರ್ಮಾಧಿಕಾರಿ ಡಾ. ಡಿ. ವೀರೇಂದ್ರ ಹೆಗ್ಗಡೆಯವರನ್ನು ಭೇಟಿಯಾದ ಯಶ್, ಅವರ ಚರಣಗಳಿಗೆ ನಮಸ್ಕರಿಸಿ ಆಶೀರ್ವಾದ ಪಡೆದರು. ಈ ಸಂದರ್ಭದಲ್ಲಿ ಚಲನಚಿತ್ರ ರಂಗದಲ್ಲಿ ಯಶ್ ಅವರ ಸೇವೆ, ಕಠಿಣ ಪರಿಶ್ರಮ ಹಾಗೂ ಅಪಾರ ಸಾಧನೆಯನ್ನು ಮುಕ್ತಕಂಠದಿಂದ ಶ್ಲಾಘಿಸಿ ಅಭಿನಂದಿಸಿದ ಹೆಗ್ಗಡೆಯವರು, ಅವರು ಮುಂಬರುವ ದಿನಗಳಲ್ಲಿ ಇನ್ನೂ ಹೆಚ್ಚಿನ ಎತ್ತರದ ಸಾಧನೆ ಮಾಡಲಿ ಎಂದು ಹಾರೈಸಿ ಆಶೀರ್ವದಿಸಿದರು. ಕ್ಷೇತ್ರದ ಪರವಾಗಿ ನಟ ಯಶ್ ಅವರನ್ನು ವೀರೇಂದ್ರ ಹೆಗ್ಗಡೆಯವರು ಶಾಲು ಹೊದಿಸಿ, ಸ್ಮರಣಿಕೆ ನೀಡಿ ಗೌರವಿಸಿದರು.

## ಸಮಾಜಮುಖಿ ಕಾರ್ಯಗಳಿಗೆ ಸದಾ ಸ್ಪಂದಿಸುತ್ತೇನೆ: ಹರಿಕೃಷ್ಣ ಪುನರೂರು



ಮಂಗಳೂರು: ಸಮಾಜದಲ್ಲಿ ಕಷ್ಟದಲ್ಲಿರುವವರಿಗೆ ನನ್ನ ಇಳಿ ವಯಸ್ಸಿನವರೆಗೂ ನನ್ನಿಂದಾಗುವ ಸಹಾಯ ಮಾಡಿದ್ದೇನೆ ಎಂಬ ಆತ್ಮತೃಪ್ತಿ ನನಗಿದೆ. "ಕೊಟ್ಟದ್ದು ತನಗೆ, ಬಚ್ಚಿಟ್ಟದ್ದು ಪರರಿಗೆ" ಎಂಬ ಮಾತಿನಂತೆ ನಾನು ಕಾರ್ಯನಿರ್ವಹಿಸುತ್ತಾ ಬಂದಿದ್ದೇನೆ. ಮುಂದೆಯೂ ಸಮಾಜಮುಖಿ ಕೆಲಸಗಳಿಗೆ ಸ್ಪಂದಿಸುತ್ತೇನೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಪೂರ್ವಾಧ್ಯಕ್ಷರಾದ ಹರಿಕೃಷ್ಣ ಪುನರೂರು ತಿಳಿಸಿದ್ದಾರೆ. ದಕ್ಷಿಣ ಕನ್ನಡ ಕಾರ್ಯನಿರತ ಪತ್ರಕರ್ತರ ಸಂಘದ ವೆಬ್‌ಸೈಟ್ (www.dkwju.com) ಅನ್ನು ಅನಾವರಣಗೊಳಿಸಿ ಅವರು ಮಾತನಾ ಡಿದರು. ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಕನ್ನಡದ ಕೆಲಸ ಮಾಡಿರುವುದರ ಜೊತೆಗೆ, ಮನೆಯಿಲ್ಲದವರಿಗೆ ಸರ್ಕಾರದ ನೆರವಿನಿಂದ ಮನೆ ನಿರ್ಮಿಸಲು ಸಹಾಯ ಮಾಡಿದ್ದೇನೆ. ಅಲ್ಲದೆ, ನಾನೇ ಸ್ವತಃ 101 ಮನೆಗಳನ್ನು ಉಚಿತವಾಗಿ ನಿರ್ಮಿಸಿ ಕೊಟ್ಟಿದ್ದೇನೆ. ಖ್ಯಾತ ನೇತ್ರತಜ್ಞ ಡಾ. ಮೋದಿ ಅವರ ಮೂಲಕ ಸಾಕಷ್ಟು ಕಣ್ಣಿನ ತಪಾಸಣೆ ಶಿಬಿರಗಳನ್ನು ನಡೆಸಿ, ಆರ್ಥಿಕವಾಗಿ ಸಹಾಯ ಮಾಡಲು ಸಾಧ್ಯವಾಗಿ ದೆ. ಊರಿನಲ್ಲಿ ಸರ್ಕಾರಿ ಕನ್ನಡ ಶಾಲೆ ನಿರ್ಮಿಸಿದ ತೃಪ್ತಿಯೂ ಇದೆ ಎಂದರು.

## ಆಳ್ವಾಸ್‌ನಲ್ಲಿ 'ಊರ್ಮಿಳಾ' ಏಕವ್ಯಕ್ತಿ ರಂಗಪ್ರಯೋಗ



ಮೂಡುಬಿದಿರೆ : ಮೂಡುಬಿದಿರೆಯ ಆಳ್ವಾಸ್‌ನ ಶಿವರಾಮ ಕಾರಂತ ವೇದಿಕೆಯಲ್ಲಿ ಬುಧವಾರ 'ಅಯನಾ ಪ್ರೆಸೆಂಟ್ಸ್–ಊರ್ಮಿಳಾ' ಏಕವ್ಯಕ್ತಿ ರಂಗಪ್ರಯೋಗ ಯಶಸ್ವಿಯಾಗಿ ನೆರವೇರಿತು. ರಾಮಾಯಣದ ಅಲಕ್ಷಿತ ಪಾತ್ರವಾದ ಊರ್ಮಿಳೆಯ ನೋವು, ತ್ಯಾಗ ಹಾಗೂ ಆಂತರಿಕ ಸಂಘರ್ಷಗಳನ್ನು ನಾಟಕವು ಅತ್ಯಂತ ಪರಿಣಾಮಕಾರಿಯಾಗಿ ಪ್ರೇಕ್ಷಕರ ಎದುರು ಅನಾವರಣಗೊಳಿಸಿತು. ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ವ್ಯವಸ್ಥಾಪಕ ಟ್ರಸ್ಟಿ ವಿವೇಕ್ ಆಳ್ವ ಮಾತನಾಡಿ, ವಿದುಷಿ ಅಯನಾ ವಿ. ರಮಣ್ ತಮ್ಮ ಅಭಿನಯ, ಧ್ವನಿ ಹಾಗೂ ದೇಹಭಾಷೆಯ ಮೂಲಕ ಊರ್ಮಿಳಾ, ಲಕ್ಷ್ಮಣ, ಶ್ರುತಕೀರ್ತಿ ಹಾಗೂ ಕೈಕೇಯಿ ಪಾತ್ರಗಳನ್ನು ಸಹಜವಾಗಿ ಕಟ್ಟಿಕೊಟ್ಟಿದ್ದಾರೆ ಎಂದು ಪ್ರಶಂಸಿ ಸಿದರು. ಮಹಾಕಾವ್ಯಗಳಲ್ಲಿನ ಅಲಕ್ಷಿತ ಪಾತ್ರ ಗಳ ಒಳಮನಸ್ಸನ್ನು ಗ್ರಹಿಸುವ ಅಗತ್ಯವಿದೆ ಎಂದು ಅವರು ಪ್ರತಿಪಾದಿಸಿದರು. ಇದೇ ಸಂದರ್ಭದಲ್ಲಿ ನಿರ್ದೇಶಕ ಡಾ. ಶ್ರೀಪಾದ ಭಟ್ ಹಾಗೂ ಅಭಿನೇತ್ರಿ ವಿದುಷಿ ಅಯನಾ ರಮಣ್ ಅವರನ್ನು ಗೌರವಿಸಿ ಸನ್ಮಾನಿಸಲಾಯಿತು.

## ವಂದೇ ಮಾತರಂನ್ನು ರಾಜಕೀಯಗೊಳಿಸುತ್ತಿರುವುದು ಖಂಡನೀಯ : ಹರೀಶ್ ಕುಮಾರ್



ಮಂಗಳೂರು: ಬಂಕಿಮಚಂದ್ರ ಚಟರ್ಜಿ ಅವರು ರಚಿಸಿದ ವಂದೇ ಮಾತರಂ ಗೀತೆಯನ್ನು ಕಾಂಗ್ರೆಸ್ ಪಕ್ಷವು ಸ್ವಾತಂತ್ರ್ಯ ಹೋರಾಟದ ಕಾಲದಿಂದಲೂ ಗೌರವದಿಂದ ಹಾಡುತ್ತಾ ಬಂದಿದೆ. ಕಾಂಗ್ರೆಸ್ ಅಧಿವೇಶನಗಳು, ವಿವಿಧ ಕಾರ್ಯಕ್ರಮಗಳು ಹಾಗೂ ಕಾಂಗ್ರೆಸ್ ಕಚೇರಿಗಳಲ್ಲಿಯೂ ವಂದೇ ಮಾತರಂ ಹಾಡಲಾಗುತ್ತದೆ. ಆದರೆ, ಇದೀಗ ಬಿಜೆಪಿ ವಂದೇ ಮಾತರಂ ಗೀತೆಯನ್ನು ರಾಜಕೀಯಗೊಳಿಸಲು ಮುಂದಾಗಿರುವುದು ಖಂಡನೀಯ ಎಂದು ದಕ್ಷಿಣ ಕನ್ನಡ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೆ. ಹರೀಶ್ ಕುಮಾರ್ ತಿಳಿಸಿದ್ದಾರೆ. ವಂದೇ ಮಾತರಂ ಕುರಿತು ಕಾಂಗ್ರೆಸ್‌ಗೆ ಬುದ್ಧಿ ಹೇಳುವ ಮೊದಲು ಆರೆಸ್ಸೆಸ್ ಮತ್ತು ಬಿಜೆಪಿ ತಮ್ಮ ನಿಲುವನ್ನು ಸ್ಪಷ್ಟಪಡಿಸಬೇಕು. ಆರೆಸ್ಸೆಸ್ ಕಚೇರಿಗಳಲ್ಲಿ ವಂದೇ ಮಾತರಂ ಹಾಡಲಾಗುತ್ತದೆಯೇ? ದೇಶದ ತ್ರಿವರ್ಣ ಧ್ವಜದ ಬಗ್ಗೆ ಆರೆಸ್ಸೆಸ್ ಮತ್ತು ಬಿಜೆಪಿಗೆ ನಿಜವಾದ ಗೌರವವಿದ್ದರೆ ಆರೆಸ್ಸೆಸ್ ಕೇಂದ್ರ ಕಚೇರಿಯಲ್ಲಿ ತ್ರಿವರ್ಣ ಧ್ವಜವನ್ನು ನಿಯಮಿತವಾಗಿ ಹಾರಿ ಸಲು ಪ್ರಾರಂಭಿಸಿದ ದಿನವನ್ನು ತಿಳಿಸಲಿ ಎಂದು ಅವರು ಆಗ್ರಹಿಸಿದ್ದಾರೆ.

## ಸೆ. 6ಕ್ಕೆ 'ವಿದೇಶದಲ್ಲಿ ಅಧ್ಯಯನ–2026' ಮೇಳ




ಬೆಂಗಳೂರು: ಕರ್ನಾಟಕ ಸರ್ಕಾರದ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಅಧೀನದ ಕರ್ನಾಟಕ ವೃತ್ತಿ ಶಿಕ್ಷಣ ಅಭಿವೃದ್ಧಿ ನಿಗಮವು (KSDC) ರಾಜ್ಯದ ವಿದ್ಯಾರ್ಥಿಗಳಿಗೆ ಜಾಗತಿಕ ಉನ್ನತ ಶಿಕ್ಷಣದ ಅವಕಾಶಗಳನ್ನು ಪರಿಚಯಿಸುವ ಉದ್ದೇಶದಿಂದ ಸೆಪ್ಟೆಂಬರ್ 6 ರಂದು ಬೆಳಿಗ್ಗೆ 9:30ರಿಂದ ಬೆಂಗಳೂರಿನ ಅರಮನೆ ಮೈದಾನದ ಗಾಯತ್ರಿ ವಿಹಾರ್ (ಗೇಟ್ ನಂ. 4) ನಲ್ಲಿ "ವಿದೇಶದಲ್ಲಿ ಅಧ್ಯಯನ–2026" ಕಾರ್ಯಕ್ರಮವನ್ನು ಆಯೋಜಿಸಿದೆ. ಆಸಕ್ತ ಅರ್ಹ ಅಭ್ಯರ್ಥಿಗಳು ಸೆಪ್ಟೆಂಬರ್ 5 ರೊಳಗೆ ಅಧಿಕೃತ ವೆಬ್‌ಸೈಟ್ https://studyabroad.ksdckarnataka.comನಲ್ಲಿ ಉಚಿತವಾಗಿ ನೋಂದಾಯಿಸಿಕೊಂಡು ಕಾರ್ಯಕ್ರಮದಲ್ಲಿ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 080–29522222 ಅನ್ನು ಸಂಪರ್ಕಿಸಲು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ತಮ್ಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರಾವಳಿ ಪ್ರವಾಸೋದ್ಯಮಕ್ಕೆ ಹೊಸ ಕಳೆ ನೀಡಲು ಯೋಜನೆ



ಮಂಗಳೂರು : ವಿಧಾನ ಪರಿಷತ್ ಸದಸ್ಯ ಶ್ರೀ ಐವನ್ ಡಿ'ಸೋಜಾ ಅವರು ನಿಯಮ 72ರಡಿಯಲ್ಲಿ ಮಂಡಿಸಿದ ಗಮನ ಸೆಳೆಯುವ ಸೂಚನೆಗೆ ಇಂಧನ ಹಾಗೂ ಪ್ರವಾಸೋದ್ಯಮ ಸಚಿವ ಕೆ.ಜಿ. ಜಾರ್ಜ್ ಅವರು ಸುದೀರ್ಘ ಉತ್ತರ ನೀಡಿದ್ದಾರೆ. ರಾಜ್ಯದ 320 ಕಿಲೋ ಮೀಟರ್ ಉದ್ದದ ಕರಾವಳಿ ಹಾಗೂ ಮಲೆನಾಡು ಭಾಗಗಳಲ್ಲಿ ಸುಸ್ಥಿರ ಹಾ ಗೂ ಜವಾಬ್ದಾರಿಯುತ ಪ್ರವಾಸೋದ್ಯಮವನ್ನು ವಿಶ್ವ ದರ್ಜೆಯ ಮಟ್ಟದಲ್ಲಿ ಅಭಿವೃದ್ಧಿಪಡಿಸಲು ಸರ್ಕಾರ 'ಕರಾವಳಿ ಮತ್ತು ಮಲೆನಾಡು ಕರ್ನಾಟಕ ಪ್ರವಾಸೋದ್ಯಮ ನೀತಿ 2024–2029' ರಡಿಯಲ್ಲಿ ಬೃಹತ್ ಯೋಜನೆ ರೂಪಿಸಿದೆ. 2026–27ರ ಆಯವ್ಯಯ ಭಾಷಣದ ಕಂಡಿಕೆ–406 ರಂತೆ ಸಮಗ್ರ ಕರಾವಳಿ ಪ್ರವಾಸೋದ್ಯಮ ಅಭಿವೃದ್ಧಿ ಯೋಜನೆಯ ಭಾಗವಾಗಿ ಸೀ ಪ್ಲೇನ್ (Sea Plane), ಹೆಲಿ ಟ್ಯಾಕ್ಸಿ (Heli Taxi), ಜಾಯ್ ರೈಡ್ ಹಾಗೂ ರಿವರ್ ಕ್ರೂಸ್ ಚಟುವಟಿಕೆಗಳನ್ನು ಉತ್ತೇಜಿಸಲು 2026ರ ಮೇ 27 ರಂದು ಸರ್ಕಾರಿ ಆದೇಶದ ಮೂಲಕ ತಾತ್ವಿಕ ಅನುಮೋದನೆ ನೀಡಲಾಗಿದೆ. ಆರ್ಥಿಕ ಇಲಾಖೆಯ ಸೂಚನೆಯಂತೆ ಈ ಯೋಜನೆಗಳನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವ (ಪಿಪಿಪಿ) ಮಾದರಿಯಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.

## ಆಕಾಶ್ ಇನ್ಸ್ಟಿಟ್ಯೂಟ್‌ನಿಂದ ಪ್ರತಿಭಾನ್ವೇಷಣೆ ಪರೀಕ್ಷೆ ANTHE ಘೋಷಣೆ



ಮಂಗಳೂರು: ದೇಶದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾದ ಆಕಾಶ್ ಎಜುಕೇಷನಲ್ ಸರ್ವೀಸಸ್ ಲಿಮಿಟೆಡ್, ವಿದ್ಯಾರ್ಥಿಗಳ ಶೈಕ್ಷಣಿಕ ಸಾಮರ್ಥ್ಯವನ್ನು ಅಳೆಯಲು ತನ್ನ ಮಹತ್ವಾಕಾಂಕ್ಷೆಯ 'ಆಕಾಶ್ ನ್ಯಾಷನಲ್ ಟ್ಯಾಲೆಂಟ್ ಹಂಟ್ ಎಕ್ಸಾಮ್' (ANTHE) ಅನ್ನು ಅಧಿಕೃತವಾಗಿ ಪ್ರಾರಂಭಿಸಿದೆ. ಕಳೆದ 16 ವರ್ಷಗಳಲ್ಲಿ 1 ಕೋಟಿಗೂ ಹೆಚ್ಚು ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿರುವ ಈ ಪರೀಕ್ಷೆಯು ಭಾರತದ ಅತ್ಯಂತ ದೀರ್ಘಕಾಲದ ಮತ್ತು ಅತಿದೊಡ್ಡ ಪ್ರತಿಭಾ ಗುರುತಿಸುವಿಕೆ ವೇದಿಕೆಯಾಗಿ ಹೊರಹೊಮ್ಮಿದೆ ಎಂದು ಕರ್ನಾಟಕದ ಶಾಖೆಗಳ ರಾಜ್ಯ ಮುಖ್ಯಸ್ಥರಾದ ಡಾ. ವಿಕ್ರಮ್ ಚಕ್ರವರ್ತಿ ತಿಳಿಸಿದರು. ನಗರದ ಆಕಾಶ್ ಆವರಣದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಈ ಬಗ್ಗೆ ಮಾಹಿತಿ ನೀಡಿದ ಅವರು, ಈ ಬಾರಿಯ ಪರೀಕ್ಷೆಯ ಮುಖ್ಯ ವೈಶಿಷ್ಟ್ಯವೆಂದರೆ ಕೇವಲ ಅಂಕಗಳನ್ನು ನೀಡುವುದಲ್ಲದೆ, ವಿದ್ಯಾರ್ಥಿಯ ವಿಷಯ ಜ್ಞಾನ, ವಿಶ್ಲೇಷಣಾತ್ಮಕ ಸಾಮರ್ಥ್ಯ ಮತ್ತು ಪರೀಕ್ಷಾ ನಡವಳಿಕೆಯನ್ನು ವೈಜ್ಞಾನಿಕವಾಗಿ ವಿಶ್ಲೇಷಿಸುವ 'ನೈದಾನಿಕ ಮೌಲ್ಯಮಾಪನ' (Diagnostic Assessment) ಮಾದರಿಯಲ್ಲಿ ಪರೀಕ್ಷೆ ನಡೆಯಲಿದೆ. ಪರೀಕ್ಷೆಯ ನಂತರ ಪ್ರತಿಯೊಬ್ಬ ವಿದ್ಯಾರ್ಥಿಗೂ ವಿವರವಾದ ANTHE ಇಂಟೆಲಿಜೆನ್ಸ್ ವರದಿ ಸಿಗಲಿದ್ದು, ಇದು ಸಿಇಎಸ್ಪಿಟಿಟಿಪಿ ಮತ್ತು ಎಐಕ್ಯು ಆಧಾರದಲ್ಲಿ ವಿದ್ಯಾರ್ಥಿಯ ಬಲ ಹಾಗೂ ಸುಧಾರಿಸಬೇಕಾದ ಕ್ಷೇತ್ರಗಳನ್ನು ಗುರುತಿಸಲು ಸಹಕಾರಿಯಾಗಿದೆ ಎಂದರು.

## ಕರಾವಳಿಯಲ್ಲಿ ಅಡಿಕೆ ರೋಗ ನಿಯಂತ್ರಣಕ್ಕೆ ಕೇಂದ್ರದ ಬೆಂಬಲ



ಮಂಗಳೂರು: ದ.ಕ. ಸೇರಿದಂತೆ ಕರ್ನಾಟಕದ ಕರಾವಳಿ ಹಾಗೂ ಮಲೆನಾಡು ಪ್ರದೇಶಗಳಲ್ಲಿ ಅಡಿಕೆ ಬೆಳೆಗೆ ಬಾಧಿಸಿರುವ ಎಲೆಚುಕ್ಕಿ ಮತ್ತು ಹಳದಿ ಎಲೆ ರೋಗಗಳ ನಿಯಂತ್ರಣಕ್ಕೆ ವೈಜ್ಞಾನಿಕ ಸಂಶೋಧನೆ, ಕ್ಷೇತ್ರ ಸಮೀಕ್ಷೆ ಹಾಗೂ ಸಮಗ್ರ ರೋಗ ನಿರ್ವಹಣಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ. ಲೋಕಸಭೆಯ ನಿಯಮ 377ರ ಅಡಿಯಲ್ಲಿ ದ.ಕ.ಸಂಸದ ಕ್ಯಾ. ಬ್ರಿಜೇಶ್ ಚೌಟ ಅವರು ಪ್ರಸ್ತಾಪಿಸಿದ ವಿಷಯಕ್ಕೆ ಸಚಿವರು ಈ ಮಾಹಿತಿ ಹಂಚಿಕೊಂಡಿದ್ದಾರೆ. ಕಾಸರ ಗೋಡಿನ ಕೇಂದ್ರ ತೋಟಗಾರಿಕಾ ಬೆಳೆಗಳ ಸಂಶೋಧನಾ ಸಂಸ್ಥೆ ಮೂಲಕ ರೋಗ ನಿರ್ವಹಣೆಗೆ ಕೈಗೊಳ್ಳಲಾಗಿರುವ ಕ್ರಮಗಳನ್ನು ವಿವರಿಸಿದ ಸಚಿವರು, ಬೆಳ್ತಂಗಡಿ ಹಾಗೂ ಸುಳ್ಯ ಸೇರಿದಂತೆ ಏಳು ಕ್ಲಸ್ಟರ್‌ಗಳಲ್ಲಿ ಸಮಗ್ರ ರೋಗ ನಿರ್ವಹಣಾ ಪದ್ಧತಿಗಳ ಕ್ಷೇತ್ರ ಪ್ರಾತ್ಯಕ್ಷಿಕೆ ನಡೆಸಲಾಗಿದೆ ಎಂದಿದ್ದಾರೆ.



ಕರಾವಳಿ ತರಂಗಿಣಿ

# ಕಲಾ ತರಂಗಿಣಿ



## ಖಾಕಿ ಖದರ್‌ನಲ್ಲಿ ರಾಕ್‌ಲೈನ್ ಮಿಂಚು

ರಂಗಿ ತರಂಗ ಖ್ಯಾತಿಯ ನಿರೂಪ್ ಭಂಡಾರಿ ಹಾಗೂ ಸ್ವಾತಿಷ್ಟ ಕೃಷ್ಣನ್ ಪ್ರಮುಖ ಭೂಮಿಕೆಯಲ್ಲಿ ನಟಿಸಿರುವ 'ಅತಿಕಾಯ' ತಂಡಕ್ಕೆ ಖ್ಯಾತ ನಿರ್ಮಾಪಕ, ನಟ ರಾಕ್‌ಲೈನ್ ವೆಂಕಟೇಶ್ ಸೇರಿಕೊಂಡಿದ್ದಾರೆ. ಪೊಲೀಸ್ ಕಮಿಷನರ್ ಪಾತ್ರ ನಿರ್ವಹಿಸುತ್ತಿರುವ ಅವರು, ಖಡಕ್ ಆಗಿ ಕಾಣಿಸಿಕೊಳ್ಳುತ್ತಿದ್ದಾರೆ. ಈಗಾಗಲೇ ಖಾಕಿ ಖದರ್‌ನಲ್ಲಿ ಹಲವಾರು ಬಾರಿ ಮಿಂಚಿರುವ ರಾಕ್‌ಲೈನ್ ವೆಂಕಟೇಶ್, ಈ ಬಾರಿ ತುಸು ಹೆಚ್ಚೇ ಖಡಕ್ ಪಾತ್ರ ನಿಭಾಯಿಸುತ್ತಿದ್ದಾರೆ. 'ನೈಜ ಘಟನೆಗಳು ಹಾಗೂ ವ್ಯಕ್ತಿಗಳಿಂದ ಸ್ಫೂರ್ತಿ ಪಡೆಯಲಾಗಿದೆ. ನಮ್ಮ ಸಿನಿಮಾದಲ್ಲಿನ ಪೊಲೀಸ್ ಕಮಿಷನರ್ ರಿಯಲ್ ಲೈಫ್‌ನಲ್ಲೂ ಇದ್ದರೆ ಚೆನ್ನಾಗಿರುತ್ತದೆ ಎನಿಸುವಷ್ಟು ನೈಜವಾಗಿ ಮೂಡಿಬಂದಿದೆ. ರಾಕ್‌ಲೈನ್ ವೆಂಕಟೇಶ್ ಅವರ ಸಪೋರ್ಟ್ ತುಂಬಾ ಇತ್ತು' ಎನ್ನುತ್ತಾರೆ ನಿರ್ದೇಶಕ ನಾಗರಾಜ್ ಪೀಣ್ಯ. ಈ ಹಿಂದೆ ಪದೇ ಪದೇ, ನಮಕ್‌ಹರಾಮ್ ಮೊದಲಾದ ವಿಭಿನ್ನ ರೀತಿಯ ಸಿನಿಮಾಗಳನ್ನು ನಿರ್ದೇಶಿಸಿದ್ದ ನಾಗರಾಜ್ ಪೀಣ್ಯ, ಇದೀಗ 'ಅತಿಕಾಯ'ನಿಗೆ ಆಕ್ಷನ್ ಕಟ್ ಹೇಳುತ್ತಿದ್ದಾರೆ. ಈ ಬಾರಿ ಹೊಸ ರೀತಿಯ ಕಥೆ ಸಿದ್ಧಪಡಿಸಿಕೊಂಡು ಅಖಾಡಕ್ಕಿಳಿದಿರುವ ನಾಗರಾಜ್, ಸದ್ಯ ಕೊನೆಯ ಹಂತದ ಚಿತ್ರೀಕರಣಕ್ಕೆ ಅಣಿಯಾಗುತ್ತಿದ್ದಾರೆ. ಈವರೆಗೂ ಬೆಂಗಳೂರಿನ ಜನ ಜಂಗುಳಿ ಪ್ರದೇಶಗಳಲ್ಲೇ ಬಹುತೇಕ ಚಿತ್ರೀಕರಣ ನಡೆಸಲಾಗಿದ್ದು ನೈಜವಾಗಿ ಮೂಡಿಬರಬೇಕೆಂಬ ಕಾರಣದಿಂದ ರಿಯಲಿಸ್ಟಿಕ್ ಆಗಿಯೇ ಶೂಟ್ ಮಾಡಲಾಗಿದೆಯಂತೆ.



ಎ.ಎನ್. ಮೂವಿ ಮೇಕರ್ಸ್ ಹಾಗೂ ನಿಹಾಲ್ ಮೂವೀಸ್ ಬ್ಯಾನರ್ ಅಡಿಯಲ್ಲಿ ನಿರ್ಮಾಣವಾಗುತ್ತಿರುವ ಈ ಸಿನಿಮಾವನ್ನು ಜೆ. ಮಹೇಶ್ ಕುಮಾರ್ ಅರ್ಪಿಸುತ್ತಿದ್ದಾರೆ. ಹರೀಶ್ ರಾಯ್, ದಿನೇಶ್ ಮಂಗ್ಳೂರು, ಬಿ.ಸುರೇಶ, ಪುಂಗ ಉಮೇಶ, ಕಾಕ್ರೋಚ್ ಸುಧೀ, ವಜ್ರಧೀರ್ ಜೈನ್, ವರ್ಧನ್ ತೀರ್ಥಹಳ್ಳಿ, 'ಕಾಂತಾರ' ಖ್ಯಾತಿಯ ರಕ್ಷಿತ್ ರಾಮಚಂದ್ರ ಶೆಟ್ಟಿ, ಮಹಾಂತೇಶ್ ಹಿರೇಮಠ್ ಹಾಗೂ ಜಾಕ್ ಜಾಲಿ ಮುಂತಾದವರು ತಾರಾಗಣದಲ್ಲಿದ್ದಾರೆ. ಉದಯಲೀಲ ಛಾಯಾಗ್ರಹಣವಿರುವ ಈ ಚಿತ್ರಕ್ಕೆ ಶ್ರೀನಿವಾಸ್ ಪಿ.ಬಾಬು ಸಂಕಲನ, ಸಚಿನ್ ಬಸ್ರೂರು ಸಂಗೀತ ಸಂಯೋಜಿಸುತ್ತಿದ್ದಾರೆ.

## ಮನೋರಂಜನ್ ನಟನೆಯ 'ಕೌಂತೇಯ' ಟೀಸರ್ ಬಿಡುಗಡೆ

ಕುಂಭರಾಶಿ ಖ್ಯಾತಿಯ ಬಿ.ಕೆ. ಚಂದ್ರಹಾಸ್ ಅವರ ನಿರ್ದೇಶನದ ಮತ್ತೊಂದು ಚಿತ್ರ ಕೌಂತೇಯ. ಶ್ರೀ ಮಹಾಂಕಾಳಿ ಪಿಕ್ಚರ್ಸ್ ಅಡಿ ಸುರೇಶ್ ಕುಮಾರ್ ಅವರು ನಿರ್ಮಿಸಿರುವ ಈ ಚಿತ್ರದಲ್ಲಿ ಹಿರಿಯನಟ ಅಚ್ಯುತ್ ಕುಮಾರ್ ನಿವೃತ್ತಿಗೆ ಹತ್ತಿರದಲ್ಲಿರೋ ಸಬ್-ಇನ್ಸ್‌ಪೆಕ್ಟರ್ ರಂಗನಾಥನ ಪಾತ್ರ ನಿರ್ವಹಿಸಿದ್ದಾರೆ. ಅಲ್ಲದೆ ಯುವನಟ ಮನೋರಂಜನ್ ರವಿಚಂದ್ರನ್ ನೆಗೆಟಿವ್ ಶೇಡ್ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. 'ಕೌಂತೇಯ' ಕುಂತೀಪುತ್ರ ಕರ್ಣನ ಇನ್ನೊಂದು ಹೆಸರು. ಹಾಗಂತ ಇದು ಪೌರಾಣಿಕ ಕಥೆಯಲ್ಲ, ಮರ್ಡರ್ ಮಿಸ್ಟ್ರಿ ಆಧಾರಿತ ಎಮೋಷನಲ್ ಕ್ರೈಮ್ ಥ್ರಿಲ್ಲರ್. ಈ ಚಿತ್ರದ ಟೀಸರ್ ಬಿಡುಗಡೆ ಸಮಾರಂಭ ಇತ್ತೀಚೆಗೆ ನಡೆಯಿತು. ವೇದಿಕೆಯಲ್ಲಿ ನಿರ್ದೇಶಕ ಬಿ.ಕೆ. ಚಂದ್ರಹಾಸ್ ಮಾತನಾಡುತ್ತ ಮನೋರಂಜನ್ ಅವರು ವಿಲನ್ ಶೇಡ್ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ರಕ್ತಪಾತ ಒಳ್ಳೆಯದಲ್ಲ ಎಂದು ಚಿತ್ರದ ಮೂಲಕ ಹೇಳಹೊರಟಿದ್ದೇವೆ. ಬೆಂಗಳೂರು, ಮೈಸೂರು ಸುತ್ತಮುತ್ತ 3 ಹಂತಗಳಲ್ಲಿ ಚಿತ್ರೀಕರಣ ನಡೆಸಿದ್ದೇವೆ. ಸದ್ಯ ಚಿತ್ರದ ರೀರೆಕಾರ್ಡಿಂಗ್ ಕಾರ್ಯ ನಡೆಯುತ್ತಿದ್ದು, ನವೆಂಬರ್ ವೇಳೆಗೆ ರಿಲೀಸ್ ಮಾಡೋ ಪ್ಲಾನಿದೆ ಎಂದರು. ನಟಿ ಪ್ರಿಯಾಂಕ ತಿಮ್ಮೇಶ್ ಮಾತನಾಡುತ್ತ ಚಂದ್ರಹಾಸ ನನ್ನ ಹಳೇ ಸ್ನೇಹಿತರು. ಗಣಪ ಚಿತ್ರದಲ್ಲಿ ಒಟ್ಟಿಗೆ ಕೆಲಸ ಮಾಡಿದ್ದೆವು. ಇಲ್ಲಿ ನಾನೊಬ್ಬ ಎಸಿಪಿ ಪಾತ್ರದಲ್ಲಿ ಕಾಣಿಸಿಕೊಂಡಿದ್ದೇನೆ. ಡಬ್ಬಿಂಗ್ ಟೈಮಲ್ಲಿ ಸಿನಿಮಾ ನೋಡಿದ್ದೇನೆ ಎಂದರು.



## ನಿತಿನ್ ಭಾರದ್ವಾಜ್ ನಿರ್ದೇಶನದ 'ರಂಗಸ್ಥಳ'

ಅಘೋರ್ ಮೋಷನ್ ಪಿಕ್ಚರ್ಸ್ ಲಾಂಛನದಲ್ಲಿ ಡಾ॥ರೇವಣ್ಣ ಹಾಗೂ ಮೋಹನ್ ಕುಮಾರ ಎಮ್ ಎಲ್ ನಿರ್ಮಿಸುತ್ತಿರುವ, ನಿತಿನ್ ಭಾರದ್ವಾಜ್ ನಿರ್ದೇಶನದ ಹಾಗೂ 'ಗಿರ್ಕಿ' ಖ್ಯಾತಿಯ ವಿಲೋಕ್‌ರಾಜ್ ನಾಯಕನಾಗಿ ನಟಿಸುತ್ತಿರುವ 'ರಂಗಸ್ಥಳ' ಚಿತ್ರದ ಟೀಸರ್ ಬಿಡುಗಡೆಯಾಗಿದೆ. ಆಕ್ಷನ್ ಡ್ರಾಮ ಕಥಾಹಂದರ ಹೊಂದಿರುವ ಈ ಚಿತ್ರದ ಟೀಸರ್ ಸಾಕಷ್ಟು ಕುತೂಹಲ ಮೂಡಿಸಿದೆ. ಟೀಸರ್ ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯಾಗುವುದರ ಜೊತೆಗೆ ಎಲ್ಲರ ಮೆಚ್ಚುಗೆಗೂ ಪಾತ್ರವಾಗುತ್ತಿದೆ. ಸದ್ಯ ಚಿತ್ರೀಕರಣ ಮುಗಿಸಿರುವ ಈ ಚಿತ್ರಕ್ಕೆ ಪೋಸ್ಟ್ ಪ್ರೊಡಕ್ಷನ್ ವರ್ಕ್ ನಡೆಯುತ್ತಿದೆ. 'ರಂಗಸ್ಥಳ' ಆಕ್ಷನ್ ಡ್ರಾಮ ಕಥಾಹಂದರ ಹೊಂದಿರುವ ಚಿತ್ರವಾಗಿದೆ. ಅಡ್ಕತೋಡಿ ಗ್ರಾಮಕ್ಕೆ ಒಬ್ಬ ಅಪರಿಚಿತ ವ್ಯಕ್ತಿಯು ಆಗಮನವಾಗುತ್ತದೆ. ಆತನ ನಿಗೂಢ ಹಾಗೂ ಅಶುಭಕರ ಉಪಸ್ಥಿತಿಯು, ಗ್ರಾಮದ ಇತಿಹಾಸದ ಮೇಲ್ಮೈಯಡಿ ವರ್ಷಗಳಿಂದ ಹುದುಗಿದ್ದ ಕರಾಳ ರಹಸ್ಯವೊಂದನ್ನು ನಿಧಾನವಾಗಿ ಬಯಲಿಗೆಳೆಯುತ್ತದೆ. ಈ ಅಪರಿಚಿತನ ಸುತ್ತಲಿನ ನಿಗೂಢತೆ ಗ್ರಾಮದಲ್ಲಿ ಹಲವು ಪ್ರಶ್ನೆಗಳನ್ನು ಹುಟ್ಟುಹಾಕುತ್ತಿದ್ದಂತೆ ನಾಯಕ ಹಾಗೂ ಸ್ನೇಹಿತರು ಆತನ ವಿರುದ್ಧ ತಿರುಗಿಬೀಳುತ್ತಾರೆ. ಇದೇ ಚಿತ್ರದ ಕಥೆಯ ಪ್ರಮುಖ ಸಾರಾಂಶ ಎಂದು ತಿಳಿಸಿರುವ ನಿರ್ದೇಶಕ ನಿತಿನ್ ಭಾರದ್ವಾಜ್ ಮುಂದೆ ಏನಾಗುತ್ತದೆ ಎಂಬುದನ್ನು ಚಿತ್ರದಲ್ಲೇ ನೋಡಬೇಕು ಎನ್ನುತ್ತಾರೆ. ಕಿರುಚಿತ್ರಗಳು ಹಾಗೂ ಜಾಹೀರಾತುಗಳಲ್ಲಿ ಕೆಲಸ ಮಾಡಿದ್ದಾರೆ. ಇದೀಗ 'ರಂಗಸ್ಥಳ' ಚಿತ್ರದ ಮೂಲಕ ನಿರ್ದೇಶಕನಾಗಿ ಹಿರಿತೆರೆಗೆ ಪ್ರವೇಶ ಮಾಡಿದ್ದಾರೆ. 'ಗಿರ್ಕಿ', 'ಡಾಟರ್ ಆಫ್ ಪಾರ್ವತಮ್ಮ' ಮುಂತಾದ ಚಿತ್ರಗಳಲ್ಲಿ ನಟಿಸಿರುತ್ತಾರೆ.



## 'ರೋಲೆಕ್ಸ್' ಚಿತ್ರದ ಟೀಸರ್ ಬಿಡುಗಡೆ

ನಟ ಕೋಮಲ್ ಕುಮಾರ್ ವಿಭಿನ್ನ ಪಾತ್ರದಲ್ಲಿ ಕಾಣಿಸಿಕೊಂಡಿರುವ 'ರೋಲೆಕ್ಸ್' ಚಿತ್ರದ ಟೀಸರ್ ಬಿಡುಗಡೆಯಾಗಿದೆ ಕೋಮಲ್‌ಗೆ ನಾಯಕಿಯಾಗಿ ಸೋನಲ್ ಮಾಂತೆರೊ ಕಾಣಿಸಿಕೊಂಡಿದ್ದಾರೆ. ವಿಶೇಷಪಾತ್ರದಲ್ಲಿ ವಿನೋದ್ ಪ್ರಭಾಕರ್ ಕಾಣಿಸಿಕೊಂಡಿದ್ದಾರೆ. ಹಿರಿಯ ಕಲಾವಿದರಾದ ಅಚ್ಯುತ್ ಕುಮಾರ್, ಅರುಣಾ ಬಾಲರಾಜ್, ನವೀನ್ ಪಡೀಲ್, ರಾಣಾ ಸೇರಿದಂತೆ ಕಲಾವಿದರ ದಂಡೇ ಈ ಚಿತ್ರದಲ್ಲಿದೆ. ಇತ್ತೀಚೆಗೆ ಈ ಚಿತ್ರದ ಟೀಸರ್ ಬಿಡುಗಡೆ ಸಮಾರಂಭ ಅದ್ದೂರಿಯಾಗಿ ನೆರವೇರಿತು. ನಿರ್ಮಾಪಕ ಅಂಬಟಿ ಮಧು ಮೋಹನ್ ಕೃಷ್ಣ ಟೀಸರ್ ಬಿಡುಗಡೆ ಮಾಡಿದರು. ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. ನಿರ್ದೇಶಕ ಶ್ರೀನಿವಾಸ್ ಮಂಡ್ಯ ಮಾತನಾಡಿ, ಇತ್ತೀಚೆಗೆ ಚಿತ್ರದ ಮೊದಲ ಕಾಪಿ ನೋಡಿ ನಿರ್ಮಾಪಕರು ಖುಷಿಪಟ್ಟರು. ನಿರ್ಮಾಪಕರು ಖುಷಿಯಾದಾಗ ನಿರ್ದೇಶಕರ ಶ್ರಮ ಸಾರ್ಥಕವಾದ ಹಾಗೆ. ನಟನೆಯ ಮೂಲಕ ಮೋಡಿ ಮಾಡಿರುವ ಕೋಮಲ್ ಕುಮಾರ್ ಅವರು ಇಡೀ ಚಿತ್ರವನ್ನು ಹೆಗಲ ಮೇಲೆ ಹಾಕಿಕೊಂಡು ಸಿನಿಮಾ ಮಾಡಿದ್ದಾರೆ. ನಗೆ ಹಬ್ಬದ ರಸದೌತಣ ಉಣಬಡಿಸಲು ಕೋಮಲ್ ಸಜ್ಜಾಗಿದ್ದಾರೆ. ಕಾಮಿಡಿ ಮತ್ತು ಪ್ರೀತಿಯ ಕಥೆ ಹೊಂದಿದೆ. ನಟ ವಿನೋದ್ ಪ್ರಭಾಕರ್ ಪ್ರಮುಖ ಪಾತ್ರ ದಲ್ಲಿ ಕಾಣಿಸಿಕೊಂಡಿದ್ದಾರೆ. ನಾಯಕಿ, ಹಸನ್ಮುಖಿ ಚೆಲುವೆ ಸೋನಾಲ್ ಮೊಂತೆರೊ ಬಂದ ನಂತರ ಚಿತ್ರಕ್ಕೆ ಮತ್ತಷ್ಟು ಕಳೆ ಬಂದಿತ್ತು. ಜೊತೆಗೆ ಪಾತ್ರಕ್ಕೆ ನ್ಯಾಯ ಒದಗಿಸಿ ದ್ದಾರೆ. 'ರೋಲೆಕ್ಸ್' ಮುಗ್ಧ ಭಾವನಾತ್ಮಕ ಕೌಟಂಬಿಕ ಚಿತ್ರ. ಕುಟುಂಬ ಸಮೇತ ನೋಡಬಹುದಾದ ಚಿತ್ರ ಎಂದು ಹೇಳಿದರು. ನಟ ಕೋಮಲ್ ಮಾತ ನಾಡಿ, ವಿನೋದ್ ಪ್ರಭಾಕರ್ ಅವರ ಜೊತೆ ನಟಿಸಿದ್ದು ಖುಷಿ ಕೊಟ್ಟಿದೆ ಎಂದರು.



## ಅಕ್ಷಯ್ ಕುಮಾರ್ – ಸೈಫ್ ಅಲಿ ಖಾನ್ ಜೋಡಿಯ 'ಹೈವಾನ್' ಟ್ರೇಲರ್

ಬಾಲಿವುಡ್‌ನ ಬಹುನಿರೀಕ್ಷಿತ ಥ್ರಿಲ್ಲರ್ ಸಿನಿಮಾ 'ಹೈವಾನ್' ಅಧಿಕೃತ ಟ್ರೇಲರ್ ಬಿಡುಗಡೆಯಾಗಿದ್ದು, ಪ್ರೇಕ್ಷಕರಲ್ಲಿ ಚಿತ್ರದ ಮೇಲಿನ ನಿರೀಕ್ಷೆಯನ್ನು ದುಪ್ಪಟ್ಟು ಮಾಡಿದೆ. ಟೀಸರ್ ಬಿಡುಗಡೆಯಾದಾಗಿನಿಂದಲೂ ಸೃಷ್ಟಿಯಾಗಿದ್ದ ಭಾರೀ ಕುತೂಹಲಕ್ಕೆ ಈ ಟ್ರೇಲರ್ ಹೊಸ ವೇಗ ನೀಡಿದ್ದು, ಅಕ್ಷಯ್ ಕುಮಾರ್ ಮತ್ತು ಸೈಫ್ ಅಲಿ ಖಾನ್ ನಡುವಿನ ರಣರೋಚಕ ಕದನಕ್ಕೆ ವೇದಿಕೆ ಸಜ್ಜಾಗಿದೆ. ಡಾರ್ಕ್, ಮೈಜುಮ್ಮೆನಿಸುವ ಮತ್ತು ಸಸ್ಪೆನ್ಸ್ ಭರಿತ ದೃಶ್ಯಗಳಿಂದ ಕೂಡಿರುವ ಟ್ರೇಲರ್‌ನಲ್ಲಿ ಇಬ್ಬರು ದಿಗ್ಗಜ ನಟರ ನಡುವಿನ ರೋಮಾಂಚಕ ಆಟವೇ ಪ್ರಮುಖ ಆಕರ್ಷಣೆಯಾಗಿದೆ. ನಿರ್ದೇಶಕ ಪ್ರಿಯದರ್ಶನ್ ಅವರ ಚುರುಕಾದ ನಿರೂಪಣೆ ಹಾಗೂ ನಿಗೂಢ ಹಿನ್ನೆಲೆ ಸಂಗೀತವು ಪ್ರತಿಕ್ಷಣವೂ ಪ್ರೇಕ್ಷಕರನ್ನು ತುದಿಗಾಲಿನಲ್ಲಿ ನಿಲ್ಲಿಸುವಂತಹ ಅನುಭವ ನೀಡುತ್ತದೆ. ಈ ಚಿತ್ರದಲ್ಲಿ ಅಕ್ಷಯ್ ಕುಮಾರ್ ತಮ್ಮ ವೃತ್ತಿಜೀವನದಲ್ಲೇ ಅತ್ಯಂತ ಕ್ರೂರ ಹಾಗೂ ಖಳನಾಯಕನ ರೂಪದಲ್ಲಿ ಅಬ್ಬರಿಸಿದ್ದರೆ, ಅವರಿಗೆ ಪ್ರತಿಯಾಗಿ ಸೈಫ್ ಅಲಿ ಖಾನ್ ತೀವ್ರ ಸವಾಲಿನ ಅಂಥ ನಾಯಕನ ಪಾತ್ರದಲ್ಲಿ ಕಣಕ್ಕಿಳಿದಿದ್ದಾರೆ.



## ಗೋಲ್ಡನ್ ಸ್ಟಾರ್ ಗಣೇಶ್‌ಗೆ ಜೋಡಿಯಾದ–ಸಂಜನಾ ಆನಂದ್

ಗೋಲ್ಡನ್ ಸ್ಟಾರ್ ಗಣೇಶ್ ನಟನೆಯ ಬಹುನಿರೀಕ್ಷಿತ 'ತಮ್ಮ ಸುಖಾಗಮನ ಬಯುಸುವ' ಚಿತ್ರಕ್ಕೆ ನಾಯಕಿಯಾಗಿ ಸಂಜನಾ ಆನಂದ್ ಆಯ್ಕೆಯಾಗಿದ್ದಾರೆ. ಈ ಮೂಲಕ ಇಬ್ಬರು ಕಲಾವಿದರು ಇದೇ ಮೊದಲ ಬಾರಿಗೆ ತೆರೆಹಂಚಿಕೊಳ್ಳುತ್ತಿದ್ದಾರೆ. ರಾಮೇನಹಳ್ಳಿ ಜಗನ್ನಾಥ್ ನಿರ್ದೇಶಿಸುತ್ತಿರುವ ಈ ಕೌಟುಂಬಿಕ ಕಥಾಹಂದರರದ ಚಿತ್ರವು ಸದ್ಯ ಭರದಿಂದ ಚಿತ್ರೀಕರಣಗೊಳ್ಳುತ್ತಿದ್ದು, ಬೆಂಗಳೂರಿನಲ್ಲಿ ತನ್ನ ಮೊದಲ ಹಂತದ ಚಿತ್ರೀಕರಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದೆ. 'ಹೊಂದಿಸಿ ಬರೆಯಿರಿ' ಚಿತ್ರದ ಮೂಲಕ ಗಮನಸೆಳೆದಿದ್ದ ರಾಮೇನಹಳ್ಳಿ ಜಗನ್ನಾಥ್, ಈ ಬಾರಿಯೂ ಭಾವನೆಗಳಿಗೆ ಒತ್ತು ನೀಡುವ ಕಥೆಯನ್ನು ಆಯ್ದುಕೊಂಡಿದ್ದಾರೆ. ಗಣೇಶ್ ಅವರ ನಟನಾ ಶೈಲಿಯನ್ನು ಮನಸ್ಸಿನಲ್ಲಿಟ್ಟುಕೊಂಡೇ ಜಗನ್ನಾಥ್ ಈ ಚಿತ್ರದ ಕಥೆಯನ್ನು ಸಿದ್ಧಪಡಿಸಿದ್ದಾರೆ.



## 'ಮಹಾಕಾಳಿ' 2027ರ ಜನವರಿ 8ಕ್ಕೆ ಗ್ರ್ಯಾಂಡ್ ರಿಲೀಸ್

'ಹನು-ಮಾನ್' ಸಿನಿಮಾದ ಜಾಗತಿಕ ಯಶಸ್ಸಿನ ನಂತರ ಕ್ರಿಯೇಟಿವ್ ಡೈರೆಕ್ಟರ್ ಪ್ರಶಾಂತ್ ವರ್ಮಾ ಅವರ 'ಪ್ರಶಾಂತ್ ವರ್ಮಾ ಸಿನಿಮಾಟಿಕ್ ಯೂನಿವರ್ಸ್' (PVCU) ಅಡಿಯಲ್ಲಿ ಸಿದ್ಧವಾಗುತ್ತಿರುವ ಬಹುನಿರೀಕ್ಷಿತ ಐತಿಹಾಸಿಕ ಪೌರಾಣಿಕ ದೃಶ್ಯ ವೈಭವದ ಚಿತ್ರ 'ಮಹಾಕಾಳಿ'ಯ ಮೊದಲ ಅಧಿಕೃತ ಗ್ಲಿಂಪ್ಸ್ ಬಿಡುಗಡೆಯಾಗಿದೆ. 'ಶುಕ್ರಚಾರ್ಯಸ್ ವಾರ್‌ಕ್ರೈ' (Shukracharya's WarCry) ಹೆಸರಿನಲ್ಲಿ ಬಿಡುಗಡೆಯಾಗಿರುವ ಈ 2 ನಿಮಿಷ 55 ಸೆಕೆಂಡುಗಳ ವೀಡಿಯೊ ಸಾಮಾಜಿಕ ಜಾಲತಾಣಗಳಲ್ಲಿ ಭಾರಿ ಸಂಚಲನ ಮೂಡಿಸಿದ್ದು, ಚಿತ್ರತಂಡ ಚಿತ್ರದ ಬಿಡುಗಡೆ ದಿನಾಂಕವನ್ನು ಘೋಷಿಸಿದೆ. ಈ ಸಿನಿಮಾ 2027ರ ಜನವರಿ 8ರಂದು ವಿಶ್ವಾದ್ಯಂತ ಅದ್ದೂರಿಯಾಗಿ ಚಿತ್ರಮಂದಿರಗಳಲ್ಲಿ ತೆರೆಕಾಣಲಿದೆ. ಬಿಡುಗಡೆಯಾಗಿರುವ ಗ್ಲಿಂಪ್ಸ್ ಧರ್ಮ ಮತ್ತು ಅಧರ್ಮದ ನಡುವಿನ ಪ್ರಬಲ ಮಹಾಯುದ್ಧಕ್ಕೆ ಮುನ್ನುಡಿ ಬರೆದಿದೆ.



## ಮೆಗಾಸ್ಟಾರ್ ಚಿರಂಜೀವಿ ಹುಟ್ಟುಹಬ್ಬಕ್ಕೆ 'ಕಾಕಾ'?



ಮೆಗಾಸ್ಟಾರ್ ಚಿರಂಜೀವಿ ಅವರ ಹುಟ್ಟುಹಬ್ಬದ (ಆಗಸ್ಟ್ 22) ಅಂಗವಾಗಿ 'ಮೆಗಾ 158' ಚಿತ್ರತಂಡ ಅಭಿಮಾನಿಗಳಿಗೆ ಭರ್ಜರಿ ಗಿಫ್ಟ್ ನೀಡಿದೆ. 'ವಾಲ್ತೇರು ವೀರಯ್ಯ' ಚಿತ್ರದ ಯಶಸ್ಸಿನ ನಂತರ ಮೆಗಾಸ್ಟಾರ್ ಚಿರಂಜೀವಿ ಮತ್ತು ಮಾಸ್ ಕಮರ್ಷಿಯಲ್ ನಿರ್ದೇಶಕ ಬಾಬಿ ಕೊಲ್ಲಿ ಕಾಂಬಿನೇಷನ್‌ನಲ್ಲಿ ಸಿದ್ಧವಾಗುತ್ತಿರುವ ಈ ಬಹುನಿರೀಕ್ಷಿತ ಚಿತ್ರದ ಟೈಟಲ್ ಗ್ಲಿಂಪ್ಸ್ ಅನ್ನು ಅದ್ದೂರಿಯಾಗಿ ಬಿಡುಗಡೆ ಮಾಡಲಾಗಿದೆ. ಈ ಚಿತ್ರಕ್ಕೆ 'ಕಾಕಾ' ಎಂದು ಶೀರ್ಷಿಕೆ ಇಡಲಾಗಿದ್ದು, ಗ್ಲಿಂಪ್ಸ್‌ನಲ್ಲಿ ಚಿರಂಜೀವಿ ವಿಭಿನ್ನ ಶೇಡ್‌ಗಳಲ್ಲಿ ಕಾಣಿಸಿಕೊಂಡಿದ್ದಾರೆ. 'ಅಮ್ಮಾಜಿ ಆಕ್ವಾ ಇಂಡಸ್ಟ್ರೀಸ್'ನಲ್ಲಿ ಸತ್ಯಂ ಎಂಬ ಹೆಸರಿನ ಸೌಮ್ಯ ಸ್ವಭಾವದ ಸೂಪರ್‌ವೈಸರ್ ಆಗಿ ಕೆಲಸ ಮಾಡುವ ಅವರು, ಎಲ್ಲರೂ ತೆರಳಿದ ನಂತರ ನೀರಿನಲ್ಲಿ ಬಚ್ಚಿಟ್ಟಿದ್ದ ಬಂದೂಕುಗಳನ್ನು ಹೊರತೆಗೆಯುತ್ತಾರೆ. ಗ್ಲಿಂಪ್ಸ್‌ನಲ್ಲಿ ಗೆಟಪ್ ಶ್ರೀನು ಎಸೆದ ಕೀಚೈನ್ ನೀರಿನಲ್ಲಿ ಬೀಳಲಿದ್ದು, ಅದರ ಮೇಲೆ 'ಐ ಲವ್ ಯೂ ಡ್ಯಾಡಿ' ಎಂಬ ಅಕ್ಷರಗಳಿವೆ.

## 'NH66'ನಲ್ಲಿ ಶೃತಿ ಹರಿಹರನ್ ಪಯಣ

ರಾಯ ಫಿಲಂಸ್ ಲಾಂಛನದಲ್ಲಿ ಮಂಜುನಾಥ್ ಟಿ.ಆರ್ ನಿರ್ಮಿಸಿ, ನಿರ್ದೇಶಿಸಿರುವ 'NH 66' ಚಿತ್ರ ಆರಂಭದಿಂದಲೂ ಸಾಕಷ್ಟು ಕುತೂಹಲ ಮೂಡಿಸಿದೆ. ಪ್ರಮೋದ್ ಶೆಟ್ಟಿ, ಶೃತಿ ಹರಿಹರನ್, ರಾಜೇಶ್ ನಟರಂಗ ಈ ಚಿತ್ರದ ಪ್ರಮುಖಪಾತ್ರದಲ್ಲಿ ನಟಿಸಿದ್ದಾರೆ. ಇತ್ತೀಚೆಗಷ್ಟೇ ಪ್ರಮೋದ್ ಶೆಟ್ಟಿ ಅವರ ಫಸ್ಟ್‌ಲುಕ್ ಬಿಡುಗಡೆ ಮಾಡಿದ್ದ



ಚಿತ್ರತಂಡ ಈಗ ಶೃತಿ ಹರಿಹರನ್ ಅವರ ಫಸ್ಟ್‌ಲುಕ್ ಅನಾವರಣ ಮಾಡಿದೆ. 'NH 66', ಹೆಸರೆ ಹೇಳುವಂತೆ ಒಂದು ಸಂಚಾರಿ ಕಥೆಯಾಗಿದೆ. "One highway many secrets" ಎಂಬ ಅಡಿಬರಹ ಈ ಚಿತ್ರಕ್ಕಿದೆ. ಮೂರು ಮುಖ್ಯ ಪಾತ್ರಗಳ ಸುತ್ತ ನಿರ್ದೇಶಕರು ರೋಮಾಂಚನಕಾರಿ ಕಥೆ ಹೆಣೆದಿದ್ದಾರೆ. ಇದು ಮಂಗಳೂರಿನಿಂದ ಮುಂಬೈಗೆ ಸಾಗುವ ಮಾರ್ಗದಲ್ಲಿ ನಡೆಯುವ ಕಥೆಯಾಗಿರಲಿದೆ. ಪ್ರಮೋದ್ ಶೆಟ್ಟಿ ಕ್ಯಾಬ್ ಚಾಲಕನಾಗಿ ಅಭಿನಯಿಸುತ್ತಿದ್ದಾರೆ.

## ತೇಜ ಸಜ್ಜಾ, ಪ್ರಶಾಂತ್ ವರ್ಮಾ ಹೊಸ ಚಿತ್ರದ ಟೈಟಲ್ ಗ್ಲಿಂಪ್ಸ್ ಬಿಡುಗಡೆ !

'ಹನು–ಮಾನ್' ಮತ್ತು 'ಮಿರಾಯ್' ಚಿತ್ರಗಳ ಮೂಲಕ ದೇಶಾದ್ಯಂತ ಭಾರಿ ಸಂಚಲನ ಮೂಡಿಸಿರುವ ಯಂಗ್ ಸೂಪರ್ ಹೀರೋ ತೇಜ ಸಜ್ಜಾ ಅಭಿನಯದ, 'ಜಾಂಬಿ ರೆಡ್ಡಿ' ಸೀಕ್ವೆಲ್‌ನ ಅಧಿಕೃತ ಶೀರ್ಷಿಕೆ ಬಿಡುಗಡೆಯಾಗಿದೆ. ತೇಜ ಸಜ್ಜಾ ಅವರ ಜನ್ಮದಿನದ ಅಂಗವಾಗಿ 'ಜಾಂಬಿ ರೆಡ್ಡಿ 2 NXT LVL –ಡೆಡ್ ಆರ್ ಅಲೈವ್' ಶೀರ್ಷಿಕೆ ಅನಾವರಣಗೊಳಿಸಲಾಗಿದೆ. ತೆಲುಗು ಚಿತ್ರರಂಗಕ್ಕೆ ಜಾಂಬಿ ಶೈಲಿಯನ್ನು ಪರಿಚಯಿಸಿದ ನಿರ್ದೇಶಕ ಪ್ರಶಾಂತ್ ವರ್ಮಾ ಈ ಬಾರಿ 'ಕ್ರಿಯೇಟರ್' ಆಗಿ ಕಾರ್ಯನಿರ್ವಹಿಸುತ್ತಿದ್ದು, 'ದಿ ಫ್ಯಾಮಿಲಿ ಮ್ಯಾನ್ 2' ಹಾಗೂ 'ರಾಬರ್ಟ್' ನಂತಹ ಒಟಿಟಿ ಹಿಟ್‌ಗಳನ್ನು ನೀಡಿದ ಖ್ಯಾತ ನಿರ್ದೇಶಕ ಸುಪರ್ಣ್ ಎಸ್.ವರ್ಮಾ ಚಿತ್ರಕ್ಕೆ ಆಕ್ಷನ್ ಕಟ್ ಹೇಳುತ್ತಿದ್ದಾರೆ. 'ಪೀಪಲ್ ಮೀಡಿಯಾ ಫ್ಯಾಕ್ಟರಿ' ಬ್ಯಾನರ್‌ನಡಿಯಲ್ಲಿ ಟಿ.ಜಿ. ವಿಶ್ವ ಪ್ರಸಾದ್ ಮತ್ತು ಕೃತಿ ಪ್ರಸಾದ್ ಈ ಚಿತ್ರವನ್ನು ಅದ್ದೂರಿ ವೆಚ್ಚದಲ್ಲಿ ನಿರ್ಮಿಸುತ್ತಿದ್ದಾರೆ.






# ಸಿನಿಲೋಕದ ಧ್ರುವತಾರೆ ಸಿ ವಿ ಶಿವಶಂಕರ್..



ಸಿರಿವಂತನಾದರೂ ಕನ್ನಡ ನಾಡಲ್ಲೇ ಮೆರೆವೆ. ಭಿಕ್ಷುಕನಾದರೂ ಕನ್ನಡ ನಾಡಲ್ಲೇ ಮಡಿವೆ, ಬೆಳೆದಿವೆ ನೋಡ ಬೆಂಗಳೂರು ನಗರ, ನಾನೋಡಿ ನಲಿವ ಕಾರವಾರ, ಕನ್ನಡದ ರವಿ ಮೂಡಿ ಬಂದ ರಾಜ್ಯೋತ್ಸವ, ಹೋಗದಿರಿ ಸೋದರರೇ. ಹೋಗದಿರಿ ಬಂಧುಗಳೇ, ಕನ್ನಡಿಗಾ ನೀ ಭಾಗ್ಯಶಾಲಿ, ನಾಡ ಚರಿತೆ ನೆನೆಪಿಸುವ ವೀರ ಗಾಥೆಯಾ, ಎಷ್ಟೊಂದು ಚಂದವೇ ತಾಯಿ. ಜನ್ಮಕೊಟ್ಟ ಕನ್ನಡ ತಾಯಿ, ನಡೆಯೂ ಕನ್ನಡ ನುಡಿಯೂ ಕನ್ನಡ, ಮುಂತಾದ ಕನ್ನಡದ ಮಣ್ಣಿನ ಕಂಪನ್ನು ಸಾರುವ ಹಾಡುಗಳನ್ನು ಕೇಳಿದವರಿಗೆ ಸಿ ವಿ ಶಿವಶಂಕರ್ ಪರಿಚಿತರೆಂದು ಹೇಳಬಹುದು. ಅಂತಹ ಅದ್ಭುತ ಹಾಡಗಳನ್ನು ಕನ್ನಡ ಜನತೆಗೆ ನೀಡಿರುವ ಮಹಾನ್ ಸಾಹಿತಿಯ ಹೆಸರೇ ಸಿ ವಿ ಶಿವಶಂಕರ್. ಅವರು ಸುಮಾರು ಎಪ್ಪತ್ತು ವರ್ಷಗಳಿಂದ ಕನ್ನಡ ರಂಗಭೂಮಿ ಮತ್ತು ಚಲನಚಿತ್ರರಂಗದಲ್ಲಿ ಕನ್ನಡ ನಾಡು ನುಡಿಯ ಬಗ್ಗೆ ಅಪಾರ ಗೌರವ ಇಟ್ಟುಕೊಂಡು ನಟ, ಸಾಹಿತಿ ಹಾಗೂ ನಿರ್ದೇಶಕರಾದವರು. ಬಾಲ್ಯದಿಂದಲೂ ದಿವಂಗತ ಸುಬ್ಬಯ್ಯ ನಾಯ್ಡು ಅವರ ಸಂಗೀತ ಸಾಹಿತ್ಯ ಸಾಮ್ರಾಜ್ಯ ನಾಟಕ ಮಂಡಳಿಯಲ್ಲಿ ನಟರಾಗಿ ಬಹುಕಾಲ ರಂಗಭೂಮಿಯ ಸೇವೆ ಸಲ್ಲಿಸಿದವರು ಸಿ ವಿ ಶಿವಶಂಕರ್. ಫೈಲ್ವಾನ್ ಅಣ್ಣಯ್ಯಪ್ಪನವರ ಕಂಪನಿಯಲ್ಲಿ ಮತ್ತು ಉತ್ತರ ಕರ್ನಾಟಕದ ಕೆಲವು ಕಂಪನಿಗಳಲ್ಲೂ ನಟ ಹಾಗೂ ಕರ್ತೃವಾಗಿ ಗಮನ ಸೆಳೆದಿದ್ದರು. ಮದ್ರಾಸ್ಸಿನಲ್ಲಿ ಕನ್ನಡಿಗರ ಮನೆ ಮಕ್ಕಳಿಗೆ ಕನ್ನಡ ಪಾಠ ಹೇಳಿಕೊಡುತ್ತಾ ಸಿರಿಗನ್ನಡ ನಾಟಕ ಸಂಘದ ಲಾಂಛನದಲ್ಲಿ ವಾರಕ್ಕೆ ಒಂದೊಂದು ಕನ್ನಡ ನಾಟಕವನ್ನು ಮಾಡಿದರು. ಪ್ರತಿ ಭಾನುವಾರ ಮದ್ರಾಸಿನ ಆಕಾಶವಾಣಿಯಿಂದ ಪ್ರಸಾರವಾಗುತ್ತಿದ್ದ 'ಹೂಮಳೆ' ಎಂಬ ಕನ್ನಡ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಆಕಾಶವಾಣಿಗಾಗಿ ನೂರಾರು ನಾಟಕಗಳನ್ನು ರಚಿಸಿದ ಶಿವಶಂಕರ್ ಅಲ್ಲಿಯೂ ಕನ್ನಡ ಕಂಪನ್ನು ಪಸರಿಸಿದರು. ಕನ್ನಡ ಚಿತ್ರರಂಗದಲ್ಲಿ 1953ರಲ್ಲಿ ಪಾದಾರ್ಪಣೆ ಮಾಡಿ ರತ್ನಗಿರಿ ರಹಸ್ಯ, ಸ್ಕೂಲ್ ಮಾಸ್ಟರ್, ಕೃಷ್ಣ ಗಾರುಡಿ, ರತ್ನ ಮಂಜರಿ, ಶುಕ್ರದೆಸೆ, ಭಕ್ತ ಕನಕದಾಸ, ಸಂತ ತುಕರಾಂ. ವೀರಕೇಸರಿ, ಭಕ್ತಚೇತ, ಮುಂತಾದ ಚಿತ್ರಗಳಲ್ಲಿ ನಟಿಸಿದರು. ಹುಣಸೂರು ಕೃಷ್ಣಮೂರ್ತಿ, ವಿಠ್ಠಲಾಚರ್ಯ, ಶಂಕರ್ ಸಿಂಗ್, ಪ್ರಭಾಕರ ಶಾಸ್ತ್ರಿ, ಜಿ ವಿ ಅಯ್ಯರ್ ಮೊದಲಾದ ಖ್ಯಾತ ನಿರ್ದೇಶಕರ ಬಳಿ ಸಹಾಯಕ ಮತ್ತು ಸಹ ನಿರ್ದೇಶಕರಾಗಿ ದುಡಿದು ಸಿ ವಿ ಶಿವಶಂಕರ್ ಅಪಾರ ಅನುಭವ ಪಡೆದರು. 1966ರಲ್ಲಿ ಸ್ವತಂತ್ರ ನಿರ್ದೇಶಕರಾದ ಸಿ ವಿ ಶಿವಶಂಕರ್ ಅವರು 'ಮನೆ ಕಟ್ಟಿ ನೋಡು' ಎಂಬ ಚಿತ್ರವನ್ನು ನಿರ್ಮಿಸಿ ನಿರ್ದೇಶಿಸಿದರು. ಆ ಚಿತ್ರದ ಮೂಲಕ ಮಂಜುಳಾ, ದ್ವಾರಕೀಶ್, ಕೆ ಎಸ್ ಎಲ್ ಸ್ವಾಮಿ(ರವಿ) ತಿಪಟೂರು ರಘು, ತೂಗುದೀಪ ಶ್ರೀನಿವಾಸ್ ಮೊದಲಾದವರನ್ನು ಚಿತ್ರರಂಗಕ್ಕೆ ಪರಿಚಯಿಸಿದ ಕೀರ್ತಿ ಶಿವಶಂಕರ್ ಅವರಿಗೆ ಸಲ್ಲುತ್ತದೆ. ಅಷ್ಟೇ ಅಲ್ಲದೆ ಈ ಚಿತ್ರದಲ್ಲಿ ಬೆಳೆದಿದೆ ನೋಡ ಬೆಂಗಳೂರು ನಗರ ಎಂಬ ಗೀತೆಯನ್ನು ರಚಿಸಿ ಬೆಂಗಳೂರು ಒಂದು ಸುಂದರ ನಗರ ಎಂಬುದನ್ನು ಚಿತ್ರಗೀತೆಯ ಮೂಲಕ ಸಾರಿದರು. ಮನೆ ಕಟ್ಟಿ ನೋಡು ಚಿತ್ರದ ಮೂಲಕ ಜಿಲ್ಲಾವಾರು ಹಂಚಿಕೆಯನ್ನು ಪ್ರಾರಂಭಿಸಿದರು. 1967ರಲ್ಲಿ 'ಪದವೀಧರ' ಎಂಬ ಚಿತ್ರವನ್ನು ನಿರ್ದೇಶಿಸಿ ಆ ಚಿತ್ರದ ಮೂಲಕ ಕಲ್ಪನಾರನ್ನು ಕಥಾ ನಾಯಕಿಯನ್ನಾಗಿ ಮಾಡಿದರು. ಆರ್ ರತ್ನ, ನಾದಪ್ರಿಯಾ, ವಾಮನ ರಾಜ್, ಸುಖದೇವ್, ಕಲಾಧರ್, ಕೀರವಾಣಿ ಮೊದಲಾದ ಸಂಗೀತ ನಿರ್ದೇಶಕರನ್ನು ಚಿತ್ರರಂಗಕ್ಕೆ ಪರಿಚಯಿಸಿದರು. 1968ರಲ್ಲಿ 'ನಮ್ಮ ಊರು' ಎಂಬ ಗ್ರಾಮೀಣ ಅಭಿವೃದ್ಧಿಯ ಸೂತ್ರವನ್ನು ಸಾರುವ ಹಳ್ಳಿಗಳೇ ಭಾರತದ ಬೆನ್ನು ಮೂಳೆ ಎಂಬ ಸಂದೇಶದೊಂದಿಗೆ ಚಿತ್ರವನ್ನು ನಿರ್ದೇಶಿಸಿ ಆ ಚಿತ್ರದ ಮೂಲಕ ರಾಜೇಶ್ ಅವರನ್ನು ನಾಯಕನಟನ್ನಾಗಿ ಪರಿಚಯಿಸಿದರು. ಆಗಿನ ಕಾಲದಲ್ಲಿ ಕರ್ನಾಟಕ ಸರಕಾರದಿಂದ ಮುಕ್ತ ಪ್ರಶಂಸೆ ಪಡೆದ ಆ ಚಿತ್ರಶೇ ನೂರರ ತೆರಿಗೆ ವಿನಾಯಿತಿ ಪಡೆದ ಪ್ರಪ್ರಥಮ ಚಿತ್ರವಾಗಿ ಮೆರೆಸಿದ ಕೀರ್ತಿ ಕೂಡ ಶಿವಶಂಕರ್ ಅವರದ್ದು. ಆ ಚಿತ್ರ ಬೊಂಬಾಯಿ ನಗರದಲ್ಲಿ ನಾಲ್ಕು ಪ್ರದರ್ಶನಗಳಂತೆ ನಾಲ್ಕು ವಾರಗಳೂ ನಡೆಯಿತು, ಮಹಡಿಯ ಮನೆ, ಪ್ರೇಮಧಾರೆ, ಮಹಾತಪಸ್ವಿ, ಹೊಯ್ಸಳ, ವೀರ ಮಹಾದೇವ, ಹುಣಸೂರು ಕೃಷ್ಣ ಮೂರ್ತಿಗಳು ಅರ್ಧಕ್ಕೆ ನಿಲ್ಲಿಸಿದ 'ನಂಜುಂಡೇಶ್ವರನ ಮಹಿಮೆ' ಕನ್ನಡ ಕುವರ, ರಾಗಸಂಗಮ, ಆದರ್ಶ ಮೊದಲಾದ ಚಿತ್ರಗಳನ್ನು ನಿರ್ದೇಶಿಸಿದ ಹಿರಿಮೆ ಸಿ ವಿ ಶಿವಶಂಕರ್ ಅವರದ್ದು. ಮಕ್ಕಳಿಗಾಗಿ ವೀಡಿಯೋ ಚಿತ್ರಗಳನ್ನು ತಯಾರಿಸಿ ಪ್ರಪ್ರಥಮ ಬಾರಿಗೆ ವೀಡಿಯೋ ಚಿತ್ರಗಳನ್ನು ಸೆನ್ಸಾರ್ ಮಾಡಿಸಿದರು. ಸುಮಾರು 8 ಮಕ್ಕಳ ವೀಡಿಯೋ ಚಿತ್ರಗಳನ್ನು ನಿರ್ಮಿಸಿ ಕರ್ನಾಟಕದ ಶಾಲೆಗಳಲ್ಲಿ ಪ್ರದರ್ಶನ ಮಾಡಿದರು. ಬೆಂಗಳೂರಿನ ಆಕಾಶವಾಣಿಯ ನಾಟಕಗಳಲ್ಲಿ ಭಾಗವಹಿಸಿದರು. ಹೀಗೆ ರಂಗಭೂಮಿ, ಸಿನಿಮಾರಂಗಗಳಲ್ಲಿ ಅಪಾರ ಸೇವೆ ಸಲ್ಲಿಸಿದರು ಅವರಿಗೆ 1991ರಲ್ಲಿ ಕರ್ನಾಟಕ ರಾಜ್ಯ ಸರಕಾರ ಅವರ ಸೇವೆಯನ್ನು ಗುರುತಿಸಿ ರಾಜ್ಯೋತ್ಸವ ಪ್ರಶಸ್ತಿ ನೀಡಿತು. ಕರ್ನಾಟಕ ಚಲನಚಿತ್ರ ನಿರ್ದೇಶಕರ ಸಂಘ ಅವರಿಗೆ ಸಿಂಗಾನಲ್ಲೂರು ಪುಟ್ಟಸ್ವಾಮಯ್ಯ ರಾಜ್‌ಕುಮಾರ್ ಪ್ರಶಸ್ತಿ ನೀಡಿದೆ. ಚಿತ್ರ ಬ್ರಹ್ಮ ಪ್ರಶಸ್ತಿ, ನೃಪತುಂಗ ಪ್ರಶಸ್ತಿ, ಸಾಹಿತ್ಯ ರತ್ನ ಪ್ರಶಸ್ತಿ, ಶುಭರಾಯ್ ವಿದ್ಯಾರತ್ನ ಪ್ರಶಸ್ತಿ, ಹೀಗೆ ಅನೇಕ ಪ್ರಶಸ್ತಿಗಳನ್ನು ತನ್ನ ಮುಡಿಗೇರಿಸಿಕೊಂಡಿದ್ದಾರೆ. ಸಿ ವಿ ಶಿವಶಂಕರ್ ಅವರು 1935ರಲ್ಲಿ ಗುಬ್ಬಿ ತಾಲೂಕಿನಲ್ಲಿ ವೆಂಕಟ ಕೃಷ್ಣ ಶಾಸ್ತ್ರಿ ಮತ್ತು ವೆಂಕಟ ಲಕ್ಷ್ಮಮ್ಮ ದಂಪತಿಗಳ ಆರು ಜನ ಮಕ್ಕಳಲ್ಲಿ ಒಬ್ಬರಾಗಿ ಜನಿಸಿದರು, ತನ್ನ ಕಲಾ ರಂಗದ ಆಸಕ್ತಿಯಿಂದ ಗುಬ್ಬಿ ಬಿಟ್ಟು ಕಲಾ ಮಾಧ್ಯಮದ ಮೊರೆ ಹೋದರು, ರಂಗ ಭೂಮಿ ಮತ್ತು ಚಿತ್ರರಂಗದಲ್ಲಿ ಗಟ್ಟಿಯಾಗಿ ಬೇರೂರಿದ ಶಿವಶಂಕರ್ 1968ರಲ್ಲಿ ರಾಧ ಅವರನ್ನು ವರಿಸಿದರು. ಶಿವಶಂಕರ್ ಅವರಿಗೆ ಇಬ್ಬರು ಮಕ್ಕಳು. ಒಬ್ಬ ಚಲನಚಿತ್ರ ನಿರ್ದೇಶಕನಾಗಿ ಕಲಾವಿದನಾಗಿ ಮುಂದುವರಿದರೆ ಇನ್ನೊಬ್ಬ ಕೂಡ ಬೇರೆ ರಂಗದಲ್ಲಿ ಕೆಲಸ ಮಾಡುತ್ತಿದ್ದರೂ ಕಲೆ ಮೇಲೆ ಆಸಕ್ತಿ ಹೊಂದಿದ್ದಾರೆ. ಸಿ ವಿ ಶಿವಶಂಕರ್ ಅವರು ಕರ್ನಾಟಕ ಮಾತ್ರವಲ್ಲದೆ ಹೊರನಾಡು, ಗಡಿನಾಡಿನ ಕನ್ನಡಿಗರಲ್ಲಿ ಭಾಷಾಭಿಮಾನ ಮೂಡಿಸಲು ವಿಶಾಲ ಕರ್ನಾಟಕದ ಅನೇಕ ಪ್ರೇಕ್ಷಣೀಯ ಸ್ಥಳಗಳಲ್ಲಿ ಹಾಗೂ ಶಿಲ್ಪಕಲಾ ಪರಿಪೂರ್ಣ ದೇವಾಲಯಗಳ ಚಿತ್ರೀಕರಣ ನಡೆಸಿ ಪ್ರತಿಯೊಬ್ಬ ಕನ್ನಡಿಗನು ಹೆಮ್ಮೆ ಪಡುವಂತೆ ಅಚ್ಚಕನ್ನಡದ ಸ್ವಚ್ಛ ಚಿತ್ರವನ್ನು ನಿರ್ಮಿಸಿದ್ದಾರೆ. ಇಂತಹ ಮಹಾನ್ ಸಾಧಕ 2023ರ ಜೂನ್ 27ರಂದು ದೈವಾಧೀನರಾದರು. ನಮ್ಮ ನಾಡು ನುಡಿಯ ಬಗ್ಗೆ ಅಪಾರ ಅಭಿಮಾನ ಹೊಂದಿರುವ ಮತ್ತು ಅದನ್ನು ಕಲಾಮಾಧ್ಯಮದ ಮೂಲಕ ಕಲಾಭಿಮಾನಿಗಳಿಗೆ ಉಣಬಡಿಸಿದ ಕಲಾವಿದ, ಸಾಹಿತಿ, ನಿರ್ದೇಶಕ, ನಿರ್ಮಾಪಕ ಸಿ ವಿ ಶಿವಶಂಕರ್ ಅವರು ನಮ್ಮ ಕರಾವಳಿ ತರಂಗಿಣಿ ಪತ್ರಿಕೆಯ ಈ ವಾರದ ಸಿನಿ ಲೋಕದ ಧ್ರುವತಾರೆಯಾಗಿದ್ದಾರೆ.











ಎನ್ನಾರ್ ಕೆ ವಿಶ್ವನಾಥ್
ENNAR K VISHWANATH







KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd 'A' Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021